MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 323 | ಮಂಗಳವಾರ : 14-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 323 | TUESDAY : 14-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣಾ ಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಿತೇಶಕುಮಾರ್ ಸಿಂಗ್ ಸೂಚನೆ

**ಯುವ ಮಾರ್ಗ ಸುದ್ದಿ**



**ರಾಯಚೂರು,ಅ.13–**ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮಕೈಗೊಂಡು ಈ ಬಾರಿ ಫಲಿತಾಂಶದಲ್ಲಿ ಬದಲಾವಣೆ ಮಾಡಬೇಕೆಂದು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಆಗಿರುವ ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಿತೇಶಕುಮಾರ್ ಸಿಂಗ್ ಅವರು ಹೇಳಿದರು.

ಸೋಮವಾರ ದಂದು ನಗರದ ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಫಲಿತಾಂಶ ಕುಸಿತ ಕಂಡಿದೆ. ದೇವದುರ್ಗ ತಾಲೂಕಿನಲ್ಲಿ 17 ಶಾಲೆಗಳಲ್ಲಿ ಶೇ.40ಕ್ಕಿಂತ ಕಡಿಮೆ ಫಲಿತಾಂಶ ಬಂದಿದೆ. ಈ ತಾಲೂಕಿನಲ್ಲಿನ ಮಕ್ಕಳಿಗೆ ಬರವಣಿಗೆ ಕೌಶಲ್ಯವಿಲ್ಲ ಎಂಬ ಮಾಹಿತಿಯಿದೆ. ರಾಯಚೂರು ನಗರ ವ್ಯಾಪ್ತಿಯಲ್ಲಿ 60 ಶಾಲೆಗಳಲ್ಲಿ ಶೇ.40ಕ್ಕಿಂತ ಕಡಿಮೆ ಫಲಿತಾಂಶ ದಾಖಲಾಗುತ್ತದೆ. ನಗರ ವ್ಯಾಪ್ತಿಯ ಸಾಕಷ್ಟು ಮಕ್ಕಳು ಶಾಲೆಗೆ ಬರುವುದಿಲ್ಲ ಎಂಬ ಮಾಹಿತಿಯೂ ಇದ್ದು, ಫಲಿತಾಂಶ ಸುಧಾರಣೆಗೆ ಸೂಕ್ತ ಕ್ರಮಕೈಗೊಳ್ಳಬೇಕು. ವಾರದಲ್ಲಿ 2-3 ಶಾಲೆಗಳಿಗೆ ಆಯಾ ತಾಲೂಕು ವ್ಯಾಪ್ತಿಯ ನೋಡೆಲ್ ಅಧಿಕಾರಿಗಳು ಭೇಟಿ ನೀಡಲೇಬೇಕು ಎಂದು ಸೂಚನೆ ನೀಡಿದರು.

ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳನ್ನು ಗುರುತಿಸುವುದಕ್ಕೆ ಆದ್ಯತೆ ನೀಡಬೇಕು. ಮಕ್ಕಳು ಶಾಲೆಯಿಂದ ಹೊರಗಡೆ ಉಳಿಯದಂತೆ ನೋಡಿಕೊಳ್ಳಬೇಕು. ಫಲಿತಾಂಶ ಸುಧಾರಣಾ ಕ್ರಮಗಳು ಪ್ರತಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಹ ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಗೃಹಲಕ್ಷ್ಮೀ ಯೋಜನೆಯ ಪ್ರಗತಿಯ ಬಗ್ಗೆ ಕೇಳಿದ ಕಾರ್ಯದರ್ಶಿಗಳು, ಗೃಹಲಕ್ಷ್ಮಿ ಫಲಾನುಭವಿಗಳಿಗೆ ಪ್ರತಿ ಮಾಹೆ 2000 ರೂ. ಹಣ ಬಿಡುಗಡೆಗೆ ವಿಳಂಬವಾಗದಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.(2ನೇಪುಟಕ್ಕೆ...)

## ಬೆಳೆ ಪರಿಹಾರ ನೀಡಲು ಬಿಜೆಪಿ ರೈತ ಮೋರ್ಚಾದಿಂದ ಮನವಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.13–** ಕಳೆದ ಎರಡು ತಿಂಗಳಿಂದ ತಾಲ್ಲೂಕಿನಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ ಹಾಳಾದ ಬೆಳೆಗಳ ಸಮೀಕ್ಷೆಯಲ್ಲಿ ಲೋಪಗಳಾಗಿವೆ ಕೂಡಲೇ ಸಮರ್ಪಕ ಸಮೀಕ್ಷೆ ನಡೆಸಿ ನ್ಯಾಯಯುತವಾಗಿ ಬೆಳೆ ನಷ್ಟ ಪರಿಹಾರ ನೀಡುವಂತೆ ಬಿಜೆಪಿ ರೈತ ಮೋರ್ಚಾ ವತಿಯಿಂದ ತಹಶೀಲ್ದಾರ್ ಗೆ ಮನವಿ ಸಲ್ಲಿಸಲಾಯಿತು.



ಅತಿವೃಷ್ಟಿಯಿಂದ ತಾಲ್ಲೂಕಿನ ಪ್ರಮುಖ ಬೆಳೆಗಳಾದ ಹತ್ತಿ ಮತ್ತು ತೊಗರಿ ಬೆಳೆಗಳು ಶೇಕಡಾ 90 ರಷ್ಟು ಹಾನಿಗೊಳಗಾಗಿವೆ. ಆದರೆ, ಕೃಷಿ ಇಲಾಖೆ, ಕಂದಾಯ ಇಲಾಖೆ ಅಧಿಕಾರಿಗಳು ಮತ್ತು ಬೆಳೆ ಸಮೀಕ್ಷೆ ಸಿಬ್ಬಂದಿ ಸಮೀಕ್ಷೆಯನ್ನು ಸರಿಯಾಗಿ ನಡೆಸಿಲ್ಲ. ಅಲ್ಲದೆ, ಹಲವಾರು ಲೋಪದೋಷಗಳಿಂದಾಗಿ ಶೇಕಡಾ 50 ರಷ್ಟು ಬೆಳೆಗಳ ಮಾಹಿತಿಯನ್ನು ಸಮರ್ಪಕವಾಗಿ ತಯಾರಿಸಿಲ್ಲ. ಇದರಿಂದಾಗಿ ಬಹುತೇಕ ರೈತರು ಬೆಳೆ ನಷ್ಟ ಪರಿಹಾರ ದಿಂದ ವಂಚಿತರಾಗುವ ಭೀತಿ ಎದುರಾಗಿದೆ.

ಬೆಳೆ ನಷ್ಟ ಪರಿಹಾರ ಪಡೆಯುವುದರಿಂದ ರೈತರು ವಂಚಿತರಾಗುತ್ತಿದ್ದು, ಕೂಡಲೇ ಸರಿಯಾದ ಬೆಳೆ ಸಮೀಕ್ಷೆ ನಡೆಸಿ ನಷ್ಟವಾದ ಎಲ್ಲಾ ರೈತರಿಗೂ ನ್ಯಾಯಯುತವಾಗಿ ಪರಿಹಾರ ಸಿಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರೈತರು ಬೆಳೆ ನಷ್ಟ ಪರಿಹಾರ ನೀಡುವಲ್ಲಿ ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಮಾರ್ಗಸೂಚಿಯಂತೆ 1 ಹೆಕ್ಟೇರ್‌ಗೆ ಎನ್‌ಡಿಆರ್‌ಎಫ್‌ನ ರೂ 8500/– ಮತ್ತು ಎಸ್‌ಡಿಆರ್‌ಎಫ್‌ನ ರೂ 8500/– ಗಳನ್ನು ಸೇರಿಸಿ ಒಟ್ಟು ರೂ 17000/– ನಷ್ಟಪರಿಹಾರವನ್ನು ಒದಗಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ರುದ್ರಗೌಡ, ಪ್ರಧಾನ ಕಾರ್ಯದರ್ಶಿ ಶರಣಯ್ಯ ಸ್ವಾಮಿ ಕಾತರಕಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಲಿಂಗಯ್ಯ ಸ್ವಾಮಿ, ಬಿಜೆಪಿ ತಾಲೂಕ ಅಧ್ಯಕ್ಷ ವೀರಭದ್ರಪ್ಪ ಗೌಡ ಭೋಗಾವತಿ, ಪ್ರಧಾನ ಕಾರ್ಯದರ್ಶಿ ಗುರು ಸಿದ್ದಪ್ಪ ಕಣ್ಣೂರು, ಜೆ.ಸುಧಾಕರ, ಉಮಾಪತಿ ನಾಯಕ, ಕುಮಾರ ಸ್ವಾಮಿ ಮೇಧಾ, ಗೋಪಾಲ ಇಬರಾಂಪುರ, ಚಂದ್ರು ನಾಯಕ, ವಿರುಪಾಕ್ಷಿ ಗೌಡ, ರವಿ ಕುಮಾರ ಸಾಹುಕಾರ, ವಿರೇಶ ನಾಯಕ ಬೆಟ್ಟದೂರು, ರಾಜೇಂದ್ರಕುಮಾರ ಭೋಗಾವತಿ, ಕಿರಣ ಕುಮಾರ, ಅಮರೇಶ ನಾಯಕ ಜಾನೇಕಲ್, ಬಸವರಾಜ ನಕ್ಕುಂದಿ, ವೀರನಗೌಡ ಪೋತ್ನಾಳ,ಕೆ.ವೆಂಕಟೇಶ ಸೇರಿದಂತೆ ಇತರರು ಇದ್ದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಸೇರಲು ಹೊಸದಾಗಿ ಅರ್ಜಿ ಸಲ್ಲಿಸಿ: ಪಾಲಿಕೆ ಆಯುಕ್ತ ಜುಬಿನ್

**ಯುವ ಮಾರ್ಗ ಸುದ್ದಿ**



**ರಾಯಚೂರು.ಅ.13–**ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಸಿದ್ದಪಡಿಸಲಾಗುತ್ತಿರುವ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಿರುತ್ತದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಆಗಿರುವ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮಹೋಪಾತ್ರ ಅವರು ತಿಳಿಸಿದ್ದಾರೆ.

ಅರ್ಜಿ ನಮೂನೆ 19ರಲ್ಲಿ ಅರ್ಜಿ ಸ್ವೀಕರಿಸಲು 2025ರ ನವಂಬರ್ 06 ಕೊನೆಯ ದಿನಾಂಕ ಆಗಿರುತ್ತದೆ. 2025ರ ನವಂಬರ್ 25ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಹಕ್ಕು ಮತ್ತು ಆಕ್ಷೇಪಣೆಗಳಿಗೆ 2025ರ ನವಂಬರ್ 25ರಿಂದ 2025ರ ಡಿಸೆಂಬರ್ 10ರವರೆಗೆ ಕಾಲಾವಕಾಶ ನೀಡಲಾಗಿದೆ. 2025ರ ಡಿಸೆಂಬರ್ 30ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಭಾರತದ ಪ್ರಜೇಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ ದಿನಾಂಕ:01-11-2025 ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 03 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೆ ನಿರ್ಧಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ (2ನೇಪುಟಕ್ಕೆ)

## ಸರ್ಕಾರಿ ಯೋಜನೆಗಳ ಸಂಪೂರ್ಣವಾದ ಮಾಹಿತಿಯನ್ನು ಪಡೆದುಕೊಳ್ಳುವುದು ಅವಶ್ಯ: ಮಂಜು

**ಯುವ ಮಾರ್ಗ ಸುದ್ದಿ**



**ಮಾನ್ವಿ,ಅ.13–**ತಾಲೂಕಿನ ಪೋತ್ನಾಳ ಗ್ರಾಮದಲ್ಲಿನ ವಿಮುಕ್ತಿ ಸಂಸ್ಥೆಯ ಸಭಾಂಗಣದಲ್ಲಿ ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಪೋತ್ನಾಳ್ ವತಿಯಿಂದ ನಡೆದ ಗ್ರಾಮೀಣ ಭಾಗದ ಮಹಿಳೆಯರಿಗೆ ಸರ್ಕಾರಿ ಸೌಲಭ್ಯಗಳ ಕುರಿತು ಮಾಹಿತಿ ಕಾರ್ಯಗಾರಕ್ಕೆ ಚಾಲನೆ ನೀಡಿ ಬೆಂಗಳೂರು ಡಿ.ಬಿ.ಎಸ್ ಸಂಯೋಜಕರಾದ ಮಂಜು ಮಾತನಾಡಿ, ಪ್ರಧಾನಮಂತ್ರಿ ಆರೋಗ್ಯ ಯೋಜನೆ, ಮುಖ್ಯಮಂತ್ರಿ ಆರೋಗ್ಯ ಕಾರ್ಡ್, ಆಯುಷ್ಮನ್ ಕಾರ್ಡ ಗಳಿಂದ ರೂ 5 ಲಕ್ಷದವರೆಗೆ ಉಚಿತ ವೈದ್ಯಕೀಯ ಚಿಕಿತ್ಸೆಯನ್ನು ಪಡೆದುಕೊಳ್ಳಬಹುದಾಗಿದೆ ಹಾಗೂ ಯೋಜನೆಯ ಕಾರ್ಡನ್ನು ಮೊಬೈಲ್ ಮೂಲಕ ಸ್ಕ್ಯಾನ್ ಮಾಡಿದಲ್ಲಿ ಸರ್ಕಾರಿ ಯೋಜನೆಗಳ ಸಂಪೂರ್ಣವಾದ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ವಿಮುಕ್ತಿ ಸಂಸ್ಥೆಯ ಸಂಯೋಜಕರಾದ ಜಯಶೀಲ್ ದೋತರಬಂಡಿ ಮಾತನಾಡಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಮಹಿಳೆಯರಿಗಾಗಿ ಆನೇಕ ಸೌಲಭ್ಯಗಳನ್ನು ಜಾರಿಗೆ ತರಲಾಗಿದ್ದರು ಕೂಡ ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ ಕೊರತೆಯಿಂದ ಮಹಿಳಾ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಲಾಭ ದೊರೆಯುತ್ತಿಲ್ಲ ಅದ್ದರಿಂದ ಮಹಿಳೆಯರಿಗೆ ತರಬೇತಿ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮೂರು ದಿನಗಳ ತರಬೇತಿ ಕಾರ್ಯಗಾರದಲ್ಲಿ ಗ್ರಾಮೀಣ ಪ್ರದೇಶದಲ್ಲಿನ ಮಹಿಳಾ ಸ್ವಸಾಯ ಸಂಘದ ಸದಸ್ಯರುಗಳಿಗೆ ಸರ್ಕಾರಿ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲಾಯಿತು ಹಾಗೂ 150ಕ್ಕೂ ಹೆಚ್ಚು ಮಹಿಳೆಯರಿಗೆ ಸ್ಥಳದಲ್ಲಿಯೇ ಇ– ಆರೋಗ್ಯ ಕಾರ್ಡಗಳನ್ನು ಸೃಜಿಸಿ ವಿತರಿಸಲಾಯಿತು.

ಸತೀಶ್ ಫೆರ್ನಾಂಡಿಸ್ ನಿರ್ದೇಶಕರು , ಬಳ್ಳಾರಿ ಸಂಪನ್ಮೂಲ ವ್ಯಕ್ತಿಗಳಾದ ಪ್ರಕಾಶ್, ಬೆಂಗಳೂರು ಡಿ.ಬಿ.ಎಸ್. ಸಂಸ್ಥೆಯ ಮುತ್ತಪ್ಪ ಹತನೂರು, ಶರಣಬಸವ ನೀಲಗಲ್ಲು , ಕುಮಾರ್ ಪ್ರಜ್ವಲ್, ಸಂಸ್ಥೆಯ ಸಿಬ್ಬಂದಿಗಳಾದ ಚಾರ್ಲಿ ಉದ್ಬಾಳ. ಕು.ಮಮತ, ಜೆಸಿಂತಾ ಮುದ್ದನಗುಡ್ಡಿ, ಸುಂಕಲಮ್ಮ ದೇವಿಪುರ ಆರೋಗ್ಯಪ್ಪ ದುಮತಿ ಸೇರಿದಂತೆ ಗ್ರಾಮದ ಮಹಿಳೆಯರು ಇದ್ದರು.

## ಶಾಸಕರ ನೇತೃತ್ವದಲ್ಲಿ ಕೆಡಿಪಿ ಸಭೆ ಭೂಸೇನೆ ಇಲಾಖೆ : ಕಳಪೆ ಕಾಮಗಾರಿ ತನಿಖೆಗೆ ಕೆಡಿಪಿ ಸದಸ್ಯರ ಒತ್ತಾಯ

**ಯುವ ಮಾರ್ಗ ಸುದ್ದಿ**




**ಲಿಂಗಸುಗೂರು,ಅ.13–** ಪಟ್ಟಣದ ಕೆ, ಆರ್, ಐ,ಡಿ,ಎಲ್ (ಭೂಸೇನೆ ಇಲಾಖೆ)ಯ ಕಾಮಗಾರಿಗಳು ಸಂಪೂರ್ಣ ಕಳಪೆ ಮಟ್ಟದ್ದಾಗಿತ್ತು ಕೂಡಲೇ ತನಿಖೆ ತಂಡ ರಚನೆ ಮಾಡಿ ಸರ್ಕಾರದ ಹಣ ದುರ್ಬಳಕೆಗೆ ಅನುಮತಿ ಕೊಡಬೇಡಿ ಎಂದು ಕೆಡಿಪಿ ಸದಸ್ಯರಾದ ರಾಘವೇಂದ್ರ ಕುದುರಿ, ಪರಮೇಶ, ಗ್ಯಾರಂಟಿ ಸಮತಿ ಅಧ್ಯಕ್ಷ ವೆಂಕಟೇಶ ಗುತ್ತೆದಾರ ಶಾಸಕರಿಗೆ ಹೇಳಿದರು.ಪಟ್ಟಣದ ತಾಪಂ ಸಮಾಗಂಣದಲ್ಲಿ ಶಾಸಕ ಮಾನಪ್ಪ ವಜ್ಜಲ್ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ತ್ರೈಮಾಸಿಕ ಕೆಡಿಪಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದರು, ತಾಲೂಕಿನಲ್ಲಿ ನಡೆಯುವ ಕಾಮಗಾರಿಗಳು ಕಳಪೆ ಮಟ್ಟದಲ್ಲಿ ನಡೆಯುತ್ತವೆ, ನೀವು ಯಾಕೇ ಜವಾಬ್ದಾರಿ ತಗೆದುಕೊಳ್ಳುತ್ತಿಲ್ಲ ಇದರಲ್ಲಿ ನಿಮ್ಮ ಪಾತ್ರ ಏನು ಇದೆ, ಭ್ರಷ್ಟಾಚಾರ ಮಾಡಿದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ತಗೆದುಕೊಳ್ಳಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಅಧಿಕಾರಿಗಳಿಗೆ ಛಾಟಿ ಬೀಸಿದ ಶಾಸಕರು:** ಸರ್ಕಾರಿ ಆಸ್ಪತ್ರೆಗೆ ಬಂದ ರೋಗಿಗಳನ್ನು ಚೆನ್ನಾಗಿ ನೋಡಿಕೊಳ್ಳಿ, ಜನರಿಗೆ ತೊಂದರೆ ಉಂಟು ಮಾಡಬೇಡಿ, ದೊಡ್ಡಿಗಳಿಗೆ ವಿದ್ಯುತ್ ಸರಬರಾಜು ಮಾಡುತ್ತಿಲ್ಲ, ಸರ್ಕಾರದ ರೂಪಿಸಿದ ಗಂಗ ಕಲ್ಯಾಣಿ ಯೋಜನೆಗಳಿಗೆ ವಿದ್ಯುತ್ ಸರಬರಾಜು ಮಾಡಿಲ್ಲ ಎಂದು ರೈತರು ಗೋಳಾಡುತ್ತಿದ್ದಾರೆ, ರೈತರಿಗೆ ತೊಂದರೆ ನೀಡಿದರೆ ನಾನು ಸುಮ್ಮನೆ ಇರಲ್ಲ ಎಂದು ಖಾರವಾಗಿ ಹೇಳಿದರು.ತಾಲೂಕಿನಲ್ಲಿ ಜಲದಾರೆ, ಹಾಗೂ ಜೆಜೆಎಂ ಕಾಮಗಾರಿಗಳು ಸರಿಯಾಗಿ ನಿರ್ವಹಣೆ ಆಗುತ್ತಿಲ್ಲ, ಗ್ರಾಮೀಣ ಪ್ರದೇಶಗಳಲ್ಲಿ ಅರ್ಧಮರ್ಧ ಕಾಮಗಾರಿ ಮಾಡಿ ಸಿಸಿ ರಸ್ತೆಗಳು ತೋಡಿ ಹಾಗೇ ಬಿಟ್ಟಿದ್ದಾರೆ, ಅಲ್ಲಿನ ಜನರಿಗೆ ತೊಂದರೆಯಾಗುತ್ತದೆ ಕೂಡಲೇ ಸರಿಪಡಿಸಿ ಎಂದು ಎಇಇಗೆ ಹೇಳಿದರು.

ಸರ್ಕಾರಿ ಶಾಲೆ ಹಾಗೂ ವಸತಿ ನಿಲಯಕ್ಕೆ ಮೂಲಭೂತ ಸೌಕರ್ಯ ಒದಗಿಸಿ ಸರ್ಕಾರದ ಹಣವನ್ನು ಸರಿಯಾಗಿ ಬಳಕೆ ಮಾಡಿ ಮಕ್ಕಳಿಗೆ ಯಾವುದೇ ರೀತಿಯ ಅಡಚಣೆ ಆಗದಂತೆ ನೋಡಿಕೊಳ್ಳಬೇಕು ಅಧಿಕಾರಿಗಳಿಗೆ ಸೂಚನೆ ನೀಡಿದರು.ರೈತರಿಗೆ ಬಿತ್ತನೆ ಬೀಜ ರಸಗೊಬ್ಬರ ಸೇರಿದಂತೆ ಸರ್ಕಾರದಿಂದ ಬಂದ ಯೋಜನೆಗಳನ್ನು ಜಾಗೃತಿ ಮೂಡಿಸಿ ಅವುಗಳನ್ನು ಕಾರ್ಯರೂಪಕ್ಕೆ ತೆಗೆದುಕೊಂಡು ಬಂದು ರೈತರಿಗೆ ಅನುಕೂಲವಾಗುವಂತೆ ಮಾಡಿ ಎಂದು ಕೃಷಿ ಅಧಿಕಾರಿಗಳಿಗೆ ಹೇಳಿದರು.ಈ ಸಂದರ್ಭದಲ್ಲಿ ತಹಶಿಲ್ದಾರ ಸತ್ಯಮ್ಮ, ಇಒ ಉಮೇಶ, ಎಡಿ, ಪಂಪನಗೌಡ, ತಾಲೂಕ ಮಟ್ಟದ ಅಧಿಕಾರಿಗಳಾದ ಡಾ: ಅಮರೇಶ ಪಾಟೀಲ್, ಜೆಸ್ಕಾಂ ಎಇಇ ಬೆನ್ನೆಪ್ಪ ಕರಿಬಂಟನಾಳ, ಎಇಇ ಹನುಮಂತಪ್ಪ, ಕೃಷಿ ಅಧಿಕಾರಿ ಮಂಜುನಾಥ, ಅರಣ್ಯ ಅಧಿಕಾರಿ ಚಂದ್ರಶೇಖರ, ಭೀಮರಾಯ, ಸಿಡಿಪಿಒ ನಾಗರತ್ನ, ಬಿಇಒ ಸುಜಾತ ಹೂನೂರು, ಷಡಾಕ್ಷರಿ ಆದಿಮನಿ, ಶ್ರೀಶೈಲ ವಾಗ್ಮರೆ, ಪುರಸಭೆ ಅಧಿಕಾರಿ ಪ್ರವೀಣ ಕುಮಾರ್, ಜಗನ್ನಾಥ ಕುಲಕರ್ಣಿ ಸೇರಿ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ವಸತಿ ಶಾಲಾ ಸಿಬ್ಬಂದಿಗಳ ವಸತಿ ಗೃಹಗಳ ನಿರ್ಮಾಣಕ್ಕೆ ಶಾಸಕ ಮಾನಪ್ಪ ವಜ್ಜಲ್ ಭೂಮಿಪೂಜೆ

**ಯುವ ಮಾರ್ಗ ಸುದ್ದಿ**



**ಲಿಂಗಸುಗೂರು,ಅ.13–**ಪಟ್ಟಣದ ಕರಡಕಲ್ ಹೊರವಲಯದಲ್ಲಿ ಇರುವ ಅಲ್ಪಸಂಖ್ಯಾತ ಮೊರಾರ್ಜಿ ವಸತಿ ಶಾಲೆ ಪಕ್ಕದಲ್ಲಿ ಅಲ್ಪಸಂಖ್ಯಾತ ಮೊರಾರ್ಜಿ ವಸತಿ ಶಾಲೆ ಸಿಬ್ಬಂದಿಗಳಿಗೆ ವಸತಿ ಗೃಹಗಳ ನಿರ್ಮಾಣ ಕಾಮಗಾರಿಗೆ ಶಾಸಕ ಮಾನಪ್ಪ ವಜ್ಜಲ್ ಭೂಮಿಪೂಜೆ ನೆರವೇರಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜೀವಗಾಂಧಿ ವಸತಿ ನಿಗಮದಡಿ 5 ಕೋಟಿ ರೂ. ವೆಚ್ಚದಲ್ಲಿ ವಸತಿ ಗೃಹ ನಿರ್ಮಾಣಗೊಳ್ಳಲಿದೆ. ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಇನ್ನು ಹೆಚ್ಚಿನ ವಸತಿ ನಿಲಯಗಳ ಅವಶ್ಯಕತೆಯಿದೆ. ಪಟ್ಟಣದಲ್ಲಿ ಹೈಟೆಕ್ ಶಾದಿಮಹಲ್ ನಿರ್ಮಿಸುವ ಕುರಿತು ಸರ್ಕಾರಕ್ಕೆ ಮನವಿ ಮಾಡಿದ್ದೇವೆ. ಸಂಬಂಧಿಸಿದ ಇಲಾಖೆ ಸಚಿವರು ಭರವಸೆ ನೀಡಿದ್ದಾರೆ. ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರುಪೂರೈಕೆಗೆ ಅಮೃತಯೋಜನೆ, ಜಲಧಾರೆ ಮತ್ತು ಜೆಜೆಎಂಕಾಮಗಾರಿ ಪ್ರಗತಿಯಲ್ಲಿದೆ. ಎಲ್ಲ ಕಾಮಗಾರಿಗಳು ಪೂರ್ಣಗೊಂಡರೆ 24 ಗಂಟೆ ನೀರು ಸರಬರಾಜು ಆಗಲಿದೆ. ಮುದಗಲ್ ಪಟ್ಟಣದಲ್ಲಿ ಶಾಶ್ವತ ಕುಡಿಯುವ ನೀರು ಪೂರೈಕೆ ಕಾಮಗಾರಿ ಅರ್ಧಕ್ಕೆ ನಿಂತಿದೆ. ಪೂರ್ಣಗೊಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದರೂ ಗಮನ ಹರಿಸುತ್ತಿಲ್ಲ. ಕಾಂಗ್ರೆಸ್ ಸರ್ಕಾರದಲ್ಲಿ ಕಾಮಗಾರಿಗಳು ವಿಳಂಬವಾಗುತ್ತಿದ್ದು, ಅನುದಾನ ಕೇಳಿದರೆ ಹಣವಿಲ್ಲವೆಂಬ ಉತ್ತರ ದೊರೆಯುತ್ತಿದೆ. ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲಾಗುವುದೆಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶರಣಪ್ಪ ಮೇಟಿ, ಬಸನಗೌಡ ಮೇಟಿ, ಗಿರಿಮಲ್ಲನಗೌಡ ಪಾಟೀಲ್, ಅಯ್ಯಪ್ಪ ವಕೀಲ, ಜಗದೀಶ ಹಿರೇಮಠ, ಲಿಂಗಣ್ಣ ದೇವಿಕೇರಿ, ಮುದುಕಪ್ಪ ನಾಯಕ, ಭೀಮಣ್ಣ ಹಿರೇಮನಿ, ರಮೇಶ ಭೋವಿ ಇದ್ದರು.

## ಮೊದಲನೇಯ ಪುಟದಿಂದ

## ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣಾ ಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಿತೇಶಕುಮಾರ್ ಸಿಂಗ್ ಸೂಚನೆ

ಬಯೋಮೆಟ್ರಿಕ್ ಯಂತ್ರ ಅಳವಡಿಕೆಗೆ ಸೂಚನೆ: ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ನಿಲಯಗಳಿಗೆ ಪೂರೈಕೆಯಾಗುವ ಆಹಾರ ಧಾನ್ಯಗಳು ಮತ್ತು ಅದರ ಗುಣಮಟ್ಟದ ಬಗ್ಗೆ ಕಾರ್ಯದರ್ಶಿಗಳು ಕೇಳಿದರು.

ಇದರಲ್ಲಿ ಯಾವುದೇ ರೀತಿಯ ವ್ಯತ್ಯಾಸವಾಗಬಾರದು. ಕಡ್ಡಾಯವಾಗಿ ಬಯೋಮೆಟ್ರಿಕ್‌ನಲ್ಲಿನ ಮಕ್ಕಳ ಹಾಜರಾತಿಯನ್ನೇ ಪರಿಗಣನೆಗೆ ಪಡೆಯಬೇಕು. ರಿಜಿಸ್ಟರನಲ್ಲಿನ ಹಾಜರಾತಿಗೂ ಬಯೋಮೆಟ್ರಿಕನಲ್ಲಿ ಹಾಜರಾತಿಗೂ ವ್ಯತ್ಯಾಸವಾಗಕೂಡದು. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ವಸತಿ ನಿಲಯಗಳಲ್ಲಿ ಬಯೋಮೆಟ್ರಿಕ್ ಯಂತ್ರಗಳನ್ನು ಅಳವಡಿಸಿ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯಗೊಳಿಸಬೇಕು ಎಂದು ಸೂಚನೆ ನೀಡಿದರು.

ಬಾಕಿ ಸಮೀಕ್ಷೆ ಪೂರ್ಣಗೊಳಿಸಿ: ರಾಯಚೂರು ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಹೆಚ್ಚಾಗಿ ಭತ್ತ, ಹತ್ತಿ ಮತ್ತು ತೊಗರಿ ಬೆಳೆ ಬಿತ್ತನೆಯಾಗಿದೆ. ವಿಪರೀತ ಸುರಿದ ಮಳೆಯಿಂದಾಗಿ ಹತ್ತಿ, ಭತ್ತ, ತೊಗರಿ, ಜೋಳ ಸೇರಿದಂತೆ ಅನೇಕ ಬೆಳೆಗಳಿಗೆ ಹಾನಿಯಾಗಿದೆ. ಇದಕ್ಕೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಈಗಾಗಲೇ ಜಂಟಿ ಸರ್ವೆ ಕಾರ್ಯ ಪ್ರಗತಿಯಲ್ಲಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಗೆ ವಿವರಿಸಿದರು. ಬಾಕಿ ಸರ್ವೆ ಕಾರ್ಯವನ್ನು ಶೀಘ್ರವೇ ಪೂರ್ಣಗೊಳಿಸಬೇಕು ಎಂದು ಕಾರ್ಯದರ್ಶಿಗಳು ಸೂಚನೆ ನೀಡಿದರು.

ಸ್ಯಾನಿಟರಿ ಪ್ಯಾಡ್ ಪೂರೈಕೆಗೆ ಸೂಚನೆ: ಬಿಸಿಎಂ ವಸತಿ ನಿಲಯದಲ್ಲಿನ ವಿದ್ಯಾರ್ಥಿನಿಯರಿಗೆ ಅನುಕೂಲವಾಗುವಂತೆ ಆರೋಗ್ಯ ಇಲಾಖೆಯಿಂದ ಸ್ಯಾನಿಟರಿ ಪ್ಯಾಡ್ ವಿತರಣೆಯಾಗಬೇಕಿದೆ ಎಂದು ಬಿಸಿಎಂ ಇಲಾಖೆಯ ಅಧಿಕಾರಿ ಸಭೆಗೆ ತಿಳಿಸಿದರು. ಸ್ಯಾನಿಟರಿ ಪ್ಯಾಡ್ ಪೂರೈಕೆಗೆ ಸಂಬಂಧಿಸಿದಂತೆ ಇಲಾಖೆಯೊಂದಿಗೆ ಸಮನ್ವಯ ಮಾಡಲು ಕಾರ್ಯದರ್ಶಿಗಳು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೂಲಸೌಕರ್ಯಕ್ಕೆ ಒತ್ತು ಕೊಡಿ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಸ್ಥಿತಿಗತಿಯ ಬಗ್ಗೆ ಕಾರ್ಯದರ್ಶಿಗಳು ಕೇಳಿದರು. 03 ಅಲ್ಪಸಂಖ್ಯಾತರ ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ. ಅವುಗಳಲ್ಲಿ 02 ವಸತಿ ನಿಲಯಗಳಿಗೆ ನಿವೇಶನ ಲಭ್ಯವಿದ್ದು, ಒಂದಕ್ಕೆ ನಿವೇಶನ ಬೇಕು ಎಂದು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯು ತಿಳಿಸಿದರು. ವಿದ್ಯಾರ್ಥಿಗಳ ಅಗತ್ಯಕ್ಕೆ ತಕ್ಕಂತೆ ಮೂಲ ಸೌಕರ್ಯ ಕಲ್ಪಿಸಲು ಅಧಿಕಾರಿಗಳು ಒತ್ತು ಕೊಡಬೇಕು ಎಂದು ಸೂಚನೆ ನೀಡಿದರು.

ಪಿಡಿಒಗೆ ಪ್ರಶಸ್ತಿ ವಿತರಣೆ: ಪ್ರತಿ ತಿಂಗಳ ಕಾರ್ಯಕ್ಷಮತೆಯ ಆಧಾರದ ಮೇಲೆ ಅತ್ಯುತ್ತಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಎಂದು ರಾಯಚೂರು ತಾಲೂಕಿನ ಬಿಚ್ಚಾಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಾಳಮ್ಮ ಅವರಿಗೆ

ಸೆಪ್ಟೆಂಬರ್ ತಿಂಗಳಿನ ಪ್ರಶಂಸನೀಯ ಪ್ರಮಾಣ ಪತ್ರವನ್ನು ಕಾರ್ಯದರ್ಶಿಗಳು ನೀಡಿ ಪ್ರೋತ್ಸಾಹಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬೀನ್ ಮೊಹಪಾತ್ರ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಮುಖ್ಯ ಯೋಜನಾಧಿರಿಗಳಾದ ಡಾ.ಟಿ.ರೋಟಿ, ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆ. ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿದ್ದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಸೇರಲು ಹೊಸದಾಗಿ ಅರ್ಜಿ ಸಲ್ಲಿಸಿ: ಪಾಲಿಕೆ ಆಯುಕ್ತ ಜುಬಿನ್

ಸದಸ್ಯನಿಗೆ ಸಂಬಧಿಸಿದಂತೆ ಸಂಸ್ಥೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ. ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳಬೇಕು. ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1ನೇ ನವಂಬರ್ 2025ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಭೋದನಾ ವೃತ್ತಿಯಲ್ಲಿ ನಿತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ -2 ರಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು. ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತುಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಬಲ್ಕ (ಗುಚ್ಛಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗ ಸಲ್ಲಿಸತಕ್ಕದ್ದು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ರ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಅರ್ಹ ಮತದಾರರಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮಹೋಪಾತ್ರ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಕಾರ್ಯಕ್ರಮ ಅಕ್ಟೋಬರ್ 15ಕ್ಕೆ ಮುಂದೂಡಿಕೆ

**ರಾಯಚೂರು,ಅ.13–**ಕಾರ್ಮಿಕ ಇಲಾಖೆಯಿಂದ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮವನ್ನು ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ಅಕ್ಟೋಬರ್ 15ರ ಮಧ್ಯಾಹ್ನ 03ಗಂಟೆಗೆ ಮುಂದೂಡಲಾಗಿದೆ.

ಈ ಹಿಂದೆ ಅಕ್ಟೋಬರ್ 13ರ ಬೆಳಿಗ್ಗೆ 11ಗಂಟೆಗೆ ಕಾರ್ಯಕ್ರಮ ವನ್ನು ನಿಗದಿ ಮಾಡಲಾಗಿತ್ತು.ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಕಾರ್ಯಕ್ರಮ ಉದ್ಘಾಟಿಸುವರು.ಕಾರ್ಮಿಕ ಸಚಿವರು ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಘನ ಉಪಸ್ಥಿತಿ ವಹಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಗೌರವ ಉಪಸ್ಥಿತಿ ವಹಿಸುವರು.ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯ ಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಾರ್ಮಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹಸಿನ್, ಕಾರ್ಮಿಕ ಆಯುಕ್ತರು ಹಾಗೂ ರಾಜ್ಯ ವಿಮಾ ಯೋಜನಾ ವೈದ್ಯಕೀಯ ಸೇವೆಗಳು ಆಯುಕ್ತರಾದ ಡಾ.ಎಚ್.ಎನ್. ಗೋಪಾಲಕೃಷ್ಣ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಭಾರತಿ ಡಿ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಡಿಸಿ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಕಾರ್ಮಿಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿಯನ್ನು ಭಗ್ನಗೊಳಿಸಿದ ದುಷ್ಕರ್ಮಿಗಳ ಬಂಧನಕ್ಕೆ ಅಗ್ರಹ

ಯುವ ಮಾರ್ಗ ಸುದ್ದಿ



**ದೇವದುರ್ಗ,ಅ.13–** ಕಲಬುರಗಿ ಜಿಲ್ಲೆಯ ಶಹಬಾದ್ ತಾಲೂಕಿನ ಮುತ್ತಗಾ ಗ್ರಾಮದಲ್ಲಿ ಶ್ರೀನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿಯ ಎಡಗೈಯನ್ನು ಕತ್ತಿರಿಸಿ ಬಲಗೈಯ ಲ್ಲಿದ್ದ ವಚನ ಪುಸ್ತಕದ ಭಾಗವನ್ನು ಒಡೆದು ಮೂರ್ತಿಯ ಮುಖಕ್ಕೆ ರಾಡಿಯನ್ನು ಎರಚಿ ವಿರೂಪವಾಗಿ ಭಗ್ನಗೊಳಿಸಿದ ದುಷ್ಕರ್ಮಿಗಳನ್ನು ಬಂದಿಸಿವಂತೆ ತಾಲೂಕ ಹಿಂದುಳಿದ ವರ್ಗಗಳ ಒಕ್ಕೂಟ ಹಾಗೂ ಗಂಗಾಮಸ್ಥ ಸಮಾಜ ಅಗ್ರಹಿಸಿದೆ.

ಸೋಮವಾರ ಸಾರ್ವಜನಿಕ ಕ್ಲಬ್ ಮೈದಾನ ದಿಂದ ತಹಸೀಲ್ದಾರ್ ಕಚೇರಿ ವರಗೆ ಪ್ರತಿಭಟನೆ ನಡೆಸಿ ಮುಖ್ಯಮಂತ್ರಿ ಗಳಿಗೆ ಹಾಗೂ ಗೃಹ ಸಚಿವರಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ್ ಕೆ. ನಾಗಮ್ಮ ಅವರಿಗೆ ಸಲ್ಲಿಸಿದರು.

ಭಾವನಾತ್ಮಕವಾಗಿ ನೋವನ್ನುಂಟು ಮಾಡಿದ ಸಮಾಜ ಘಾತ ವ್ಯಕ್ತಿಗಳನ್ನು ತಕ್ಷಣವೇ ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕು. ಶರಣರು ಸಂತರು ಮಹಾಪುರುಷರು ಒಂದೆ ಸಮಾಜಕ್ಕೆ ಸೀಮಿತವಾಗಿರುವುದಿಲ್ಲ ಎಂದರು.

ಸರಕಾರ ಹಾಗೂ ಜಿಲ್ಲಾಡಳಿತ ವತಿಯಿಂದ ಮುತ್ತಗಾ ಗ್ರಾಮದಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿಯನ್ನು ಮರುನಿರ್ಮಾಣ ಮಾಡಬೇಕು, ಶ್ರೀ ನಿಜಶರಣ ಅಂಬಿಗರ ಚೌಡಯ್ಯನ ಮೂರ್ತಿ ಭಗ್ನ ಗೊಳಿಸಿದವರಿಗೆ ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ ಸರ್ಕಾದ ಮಾದರಿಯಲ್ಲಿ ಇವರ ಆಸ್ತಿಗಳನ್ನು ಮುಟ್ಟುಗೋಲು ಹಾಕಬೇಕು, ಹಾಗೂ ಇನ್ನು ಮುಂದೆ ಇಂತಹ ಪ್ರಕರಣ ನಡೆಯದ ಹಾಗೆ ಶರಣರ ಮೂರ್ತಿಯನ ರಕ್ಷಿಸಬೇಕೆಂದು ಒತ್ತಾಯಿಸಿ ಮನವಿ ಪತ್ರ ಸಲ್ಲಿಸಿದರು.

ಇದೆ ಸಂದರ್ಭದಲ್ಲಿ ಶರಣ ಗೌಡ ಸುಂಕೇಶ್ವರಳ, ಕೆ. ಸಾಬಣ್ಣ ಗೂಗಲ್, ಭೋಜಣ್ಣ ಮೀಣಜಿಗಿ, ಚಂದ್ರಶೇಖರ ವಿಶ್ವಕರ್ಮ, ಗೂಳಪ್ಪ ಹೇಮನೂರು, ಕಸಾಪ ಶಿವರಾಜ ಹೆಚ್, ಶಂಕರ ಹೂಗಾರ್, ಪ್ರಭು ಮಸರಕಲ್, ಬಸವರಾಜ್ ಮಡಿವಾಳ, ಪ್ರಭಾಕರ ಅಂಬಿಗೇರ,ಅಮರೇಶ ಮಾನ್ವಿಕರ್, ರಾಘವೇಂದ್ರ ಕೋಲ್ಕರ್, ವಕೀಲರು, ಪರಮಾನಂದ ದೇಸಾಯಿ, ವಿಠಲ್ ಅಂಬಿಗೇರ ಇದ್ದರು.

## ಕಲಬುರಗಿ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ





**ಕಲಬುರಗಿ, ಅ. 13–** ಭಾರಿ ಮಳೆ ಮತ್ತು ಪ್ರವಾಹವನ್ನು ನೈಸರ್ಗಿಕ ವಿಕೋಪ ಎಂದು ಪರಿಗಣಿಸುವ ಮೂಲಕ ಕಲಬುರಗಿ ಜಿಲ್ಲೆಯನ್ನು ಹಸಿ ಬರ ಜಿಲ್ಲೆ ಎಂದು ಘೋಷಿಸುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರೈತ, ದಲಿತ,ಕನ್ನಡ,ಕಾರ್ಮಿಕ ಮಹಿಳಾ, ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಕರೆ ನೀಡಿದ್ದ ಕಲಬುರಗಿ ಬಂದ್ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.ಮುಂಜಾನೆ ಆರು ಗಂಟೆ ಹೊತ್ತಿಗೆ ಬಂದ್ ಆರಂಭಗೊಂಡಿದ್ದರಿಂದ ಕೇಂದ್ರ ಬಸ್ ನಿಲ್ದಾಣದಿಂದ ಬೆಳಗ್ಗೆ 6ಕ್ಕೂ ಮುನ್ನ ಸಾರಿಗೆ ಬಸ್‌ಗಳು ನಿಗದಿತ ಜಿಲ್ಲೆಗಳತ್ತ ಮುಖ ಮಾಡಿ ಪ್ರಯಾಣ ಆರಂಭಿಸಿದವಾದರೂ, ಬಳಿಕ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಪ್ರಯಾಣಿಕರ ಹಿತದೃಷ್ಟಿಯಿಂದ ಬಸ್‌ಗಳನ್ನು ಡಿಪೋಗಳಿಂದ ಹೊರಗೆ ಬಿಡದ ಕಾರಣ ಕೇಂದ್ರ ಬಸ್ ನಿಲ್ದಾಣ ಬಿಕೋ ಎನ್ನುತ್ತಿತ್ತು.

ಇನ್ನೊಂದೆಡೆ, ಅಲ್ಲಲ್ಲಿ ಆಟೋರಿಕ್ಷಾಗಳ ಓಡಾಟ ಕಂಡುಬಂದಿತಾದರೂ ಕೇಂದ್ರ ಬಸ್ ನಿಲ್ದಾಣ, ರಾಮಮಂದಿರ ಮತ್ತು ಸರ್ದಾರ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ಅಂಗಡಿ ಮುಂಗಟ್ಟುಗಳು, ಹೋಟೆಲ್‌ಗಳು ಬಂದ್ ಪ್ರಯುಕ್ತ ಯಾವುದೇ ವಹಿವಾಟು ನಡೆಸಲಿಲ್ಲ. ಹೀಗಾಗಿ, ಬಂದ್ ಕುರಿತು ಮಾಹಿತಿ ಇಲ್ಲದೆ ದೂರದ ಊರುಗಳಿಂದ ಬಂದಿದ್ದ ಜನರು ತೊಂದರೆ ಅನುಭವಿಸಿದರು.

ರಿಂಗ್ ರಸ್ತೆಗಳಲ್ಲಿಯೂ ಬೆಳಗಿನ ಆರಂಭದಲ್ಲಿ ಪ್ರತಿಭಟನಾಕಾರರು ಅಲ್ಲಲ್ಲಿ ಕಂಡುಬಂದಿದ್ದರಿಂದ ಸಾರಿಗೆ ಸಂಸ್ಥೆಯ ಬಸ್‌ಗಳು ರಾಮಮಂದಿರ, ಖರ್ಗೆ ಪೆಟ್ರೋಲ್ ಬಂಕ್, ರಾಜಾಪುರ–ಶಹಾಬಾದ್ ಕ್ರಾಸ್, ಹುಮನಾಬಾದ್ ರಿಂಗ್ ರೋಡ್, ಆಳಂದ ಚೆಕ್‌ಪೋಸ್ಟ್ ಹಾಗೂ ಕಲಬುರಗಿಯ ಅಫಜಲಪುರ ಕ್ರಾಸ್‌ಗಳವರೆಗೆ ಅನ್ಯ ಜಿಲ್ಲೆಗಳ ಸಾರಿಗೆ ಬಸ್‌ಗಳು ಬಂದು ಅಲ್ಲಿಂದಲೇ ಹೊರವಲಯದ ರಸ್ತೆಗಳ ಮೂಲಕ ಸಂಚರಿಸಿದವು.ಈ ಮಧ್ಯೆ, ಆಳಂದ, ಅಫಜಲಪುರ, ಜೇವರ್ಗಿ, ಸೇಡಂ, ಶಹಾಬಾದ್, ಹುಮನಾಬಾದ್ ಕಡೆಗೆ ಪ್ರಯಾಣಿಸಬೇಕಿದ್ದ ಪ್ರಯಾಣಿಕರು ಅನಿವಾರ್ಯವಾಗಿ ಕ್ರೂಸರ್ ಜೀಪ್‌ಗಳನ್ನು ಆಶ್ರಯಿಸಬೇಕಾಯಿತು. ಹೀಗಾಗಿ, ಕ್ರೂಸರ್ ಚಾಲಕರು ಪ್ರಯಾಣಿಕರಿಂದ ದುಪ್ಪಟ್ಟು ಪ್ರಯಾಣ ದರ ವಸೂಲಿ ಮಾಡಿದರು.

ಕಲಬುರಗಿ ಬಂದ್ ಪ್ರಯುಕ್ತ ಸುಮಾರು 20ಕ್ಕೂ ಅಧಿಕ ಸಂಘಟನೆಗಳ ಪದಾಧಿಕಾರಿಗಳು ಗಂಜ್ ಪ್ರದೇಶದ ನಗರೇಶ್ವರ ಶಾಲೆಯಿಂದ ಬೃಹತ್ ಮೆರವಣಿಗೆಯಲ್ಲಿ ಆಗಮಿಸಿದ್ದರಿಂದ ಕಲಬುರಗಿ ನಗರದ ಸೂಪರ್ ಮಾರ್ಕೆಟ್‌ನಲ್ಲಿ ಅಂಗಡಿಗಳನ್ನು ಕೆಲ ಹೊತ್ತು ಮುಚ್ಚಲಾಗಿತ್ತು. ಮೆರವಣಿಗೆ ಜಗತ್ ವೃತ್ತವನ್ನು ತಲುಪುತ್ತಿದ್ದಂತೆಯೇ ಅಂಗಡಿ–ಮುಂಗಟ್ಟುಗಳನ್ನು ತೆರೆದ ವರ್ತಕರು ಎಂದಿನಂತೆ ತಮ್ಮ ವಹಿವಾಟು ಆರಂಭಿಸಿದರು.

ಇನ್ನು ಬಂದ್ ಕುರಿತು ಮಾಹಿತಿ ಇಲ್ಲದ ಕಾರಣಕ್ಕಾಗಿ ದೂರದ ಊರುಗಳಿಗೆ ಪ್ರಯಾಣಿಸಲು ಬಂದಿದ್ದ ಸ್ಥಳೀಯ ಪ್ರಯಾಣಿಕರು ಬಸ್‌ಗಳಿಲ್ಲದ ಕಾರಣಕ್ಕಾಗಿ ಕೇಂದ್ರ ಬಸ್ ನಿಲ್ದಾಣದಲ್ಲಿ ಮಧ್ಯಾಹ್ನ 2 ಗಂಟೆವರೆಗೆ ಬಂದ್ ಮುಕ್ತಾಯಕ್ಕಾಗಿ ಕಾಯುತ್ತಿದ್ದುದು ಗಮನ ಸೆಳೆಯುವಂತಿತ್ತು.

ಕರ್ನಾಟಕ ಪ್ರಾಂತ ರೈತ ಸಂಘ ಜಿಲ್ಲಾ ಸಮಿತಿ ಅಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ, ಅಖಿಲ ಭಾರತ ಕಿಸಾನ್ ಸಭಾ ಜಿಲ್ಲಾ ಸಮಿತಿಯ ಭಿಮಾಶಂಕರ ಮಾಡಿಯಾಳ, ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘ ಜಿಲ್ಲಾ ಸಮಿತಿ ಮುಖಂಡ ಭೀಮಶೆಟ್ಟಿ ಯಂಪಳ್ಳಿ, ನವ ಕರ್ನಾಟಕ ರೈತ ಸಂಘ ರಾಜ್ಯ ಸಮಿತಿಯ ದಯಾನಂದ ಪಾಟೀಲ್, ಕರ್ನಾಟಕ ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ನಾಗೇಂದಪ್ಪ ಥಂಬೆ, ಕರ್ನಾಟಕ ರಾಜ್ಯ ರೈತ ಸಂಘದ (ಕೋಡಿಹಳ್ಳಿ ಚಂದ್ರಶೇಖರ ಬಣ) ಮಲ್ಲಿನಾಥ ಪಾಟೀಲ್, ಕರ್ನಾಟಕ ರಾಜ್ಯ ಜನವಾದಿ ಮಹಿಳಾ ಸಂಘಟನೆ ಜಿಲ್ಲಾ ಸಮಿತಿ ಅಧ್ಯಕ್ಷೆ ಪದ್ಮನಿ ಕಿರಣಗಿ, ಕರ್ನಾಟಕ ರಾಜ್ಯ ರೈತ ಸಂಘ (ಕುರುಬೂರು ಶಾಂತಕುಮಾರ ಬಣ) ಜಿಲ್ಲಾ ಸಮಿತಿ ಪದಾಧಿಕಾರಿಗಳು ಹಾಗೂ ರೈತ, ದಲಿತ, ಕನ್ನಡ, ಕಾರ್ಮಿಕ ಮಹಿಳಾ, ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಪದಾಧಿಕಾರಿಗಳು ಹಾಗೂ ವಿವಿಧೆಡೆಗಳಿಂದ ಆಗಮಿಸಿದ್ದ ರೈತ ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಶ್ರೀಕಲ್ಮಠ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಗೆ 2025 ನೇ ಸಾಲಿನ ಅಯುರ್ ವಿದ್ಯಾಭೂಷಣ–2025 ಪ್ರಶಸ್ತಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.13–** ಬೆಂಗಳೂರಿನ ಭಾರತೀಯ ವಿದ್ಯಾಭವನದ ಸಭಾಂಗಣದಲ್ಲಿ ಕನ್ನಡಪ್ರಭ ಹಾಗೂ ಸುವರ್ಣ ನ್ಯಾಸ್ ಸುದ್ದಿವಾಹಿನಿ ಸಂಸ್ಥೆಯವರಿಂದ ನಡೆದ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಪ್ರಯುಕ್ತ ಆಯುರ್ವೇದ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆಗೈದವರಿಗೆ ನೀಡುವ ಆಯುರ್ ವಿದ್ಯಾಭೂಷಣ–2025 ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಆಯುರ್ವೇದ ಕ್ಷೇತ್ರದಲ್ಲಿ ತೋರಿದ ಸಾಧನೆಗಾಗಿ ಪಟ್ಟಣದ ಶ್ರೀ ಕಲ್ಮಠ ಶ್ರೀ ವಿರೂಪಾಕ್ಷಶಿವಾಚಾರ್ಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಗೆ 2025 ನೇ ಸಾಲಿನ ಅಯುರ್ ವಿದ್ಯಾಭೂಷಣ–2025 ಪ್ರಶಸ್ತಿಗೆ ಆಯ್ಕೆಯಾಗಿದ್ದು ಶನಿವಾರ ರಾಜ್ಯ ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರಾದ ರಾಮಲಿಂಗರೆಡ್ಡಿ ರವರು ಕಾಲೇಜಿನ ಪ್ರಾಚಾರ್ಯರಾದ ಡಾ,ಜೀವನೇಶ್ವರಯ್ಯ ರವರಿಗೆ ಪ್ರಶಸ್ತಿ ಪತ್ರ ಹಾಗೂ ಫಲಕವನ್ನು ನೀಡಿ ಗೌರವಿಸಿದರು.



ಕಾರ್ಯಕ್ರಮದಲ್ಲಿ ಕನ್ನಡಪ್ರಭ ಹಾಗೂ ಸುವರ್ಣ ನ್ಯಾಸ್ ಸುದ್ದಿವಾಹಿನಿ ಸಂಸ್ಥೆಯ ಸಂಪಾದಕರಾದ ರವಿಹೆಗಡೆ ಹಾಗೂ ಪಂಚಮಸಾಲಿ ಪೀಠದ ಜಗದ್ಗುರು ವಚನಾನಂದ ಮಹಾಸ್ವಾಮಿಗಳು, ಮಾದಾರ ಗುರು ಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯಸ್ವಾಮೀಜಿ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷರಾದ ಡಾ.ಎಂ. ಮೋಹನ್ ಆಳ್ವ ಇದ್ದರು.

# ಹಳೇ ದ್ವೇಷದ ಹಿನ್ನೆಲೆಯಲ್ಲಿ ಇಬ್ಬರು ಯುವಕರ ಬರ್ಬರ ಹತ್ಯೆ



**ವಿಜಯಪುರ,ಅ.13–**ಹಳೇ ದ್ವೇಷದ ಹಿನ್ನೆಲೆಯಲ್ಲಿ ದುಷ್ಕರ್ಮಿಗಳು ಇಬ್ಬರು ಯುವಕರನ್ನು ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಕೊಲೆಯಾದ ಯುವಕರನ್ನು ತಾಲ್ಲೂಕಿನ ಕನ್ನೂರು ಗ್ರಾಮದ ಸಾಗರ್ ಬೆಳುಂಡಗಿ (26) ಮತ್ತು ಇಸಾಕ್ ಖುರೇಶಿ (24) ಎಂದು ಗುರುತಿಸಲಾಗಿದೆ.

ರಾತ್ರಿ 10.30 ರ ಸುಮಾರಿನಲ್ಲಿ ಇವರಿಬ್ಬರು ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದಾಗ ದುಷ್ಕರ್ಮಿಗಳು ಅಡ್ಡಗಟ್ಟಿ ಹಲ್ಲೆ ನಡೆಸಿ ಇಬ್ಬರ ತಲೆ ಮೇಲೆ ಕಲ್ಲು ಎತ್ತಿಹಾಕಿ ಬರ್ಬರವಾಗಿ ಕೊಲೆ ಮಾಡಿ ಪರಾರಿಯಾಗಿದ್ದಾರೆ.

ಸುದ್ದಿ ತಿಳಿದು ಗ್ರಾಮೀಣ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಇಬ್ಬರ ಮೃತದೇಹಗಳನ್ನು ಆಸ್ಪತ್ರೆಗೆ ರವಾನಿಸಿದ್ದಾರೆ.

ಜೋಡಿ ಕೊಲೆಯ ತನಿಖೆ ಕೈಗೊಂಡಿರುವ ಪೊಲೀಸರು, ಘಟನಾ ಸ್ಥಳದ ಸುತ್ತಮುತ್ತಲಿನ ರಸ್ತೆಗಳಲ್ಲಿರುವ ಸಿಸಿ ಕ್ಯಾಮೆರಾಗಳನ್ನು ಪರಿಶೀಲಿಸಿ, ದೃಶ್ಯಾವಳಿಗಳನ್ನು ಆಧರಿಸಿ, ಹಂತಕರ ಪತ್ತೆಗೆ ಶೋಧ ಕೈಗೊಂಡಿದ್ದಾರೆ.ಈ ಜೋಡಿ ಕೊಲೆಯಿಂದ ಕನ್ನೂರು ಗ್ರಾಮದ ಜನತೆ ಆತಂಕಗೊಂಡಿದ್ದಾರೆ.

ಎರಡು ವರ್ಷದ ಹಿಂದೆ ಗ್ರಾಮದ ಈರಣ್ಣಗೌಡ ಎಂಬುವವರ ಮೇಲೆ ಈ ಇಬ್ಬರು ಹಲ್ಲೆ ನಡೆಸಿದ್ದರು, ಕೆಲ ದಿನಗಳ ಹಿಂದೆ ಚಿಕಿತ್ಸೆ ಲಿಸದೇ ಈರಣ್ಣಗೌಡ ಮೃತಪಟ್ಟಿದ್ದಾರೆ. ಇದೇ ದ್ವೇಷಕ್ಕೆ ಈ ಇಬ್ಬರನ್ನು ಕೊಲೆಗೈದಿರುವ ಶಂಕೆ ವ್ಯಕ್ತವಾಗಿದೆ.

# ಕರ್ನಾಟಕ ಅಧೋಗತಿಗೆ ತಲುಪಿದೆ ಎಂಬುದಕ್ಕೆ ದೇಶಪಾಂಡೆ ಅವರ ಹೇಳಿಕೆಯೇ ಸಾಕ್ಷಿ : ಆರ್ ಅಶೋಕ್

**ಬೆಂಗಳೂರು,ಅ.13–** ಗ್ಯಾರಂಟಿಗಳಿಂದ ಅಭಿವೃದ್ಧಿಗೆ ಹಿನ್ನೆಡೆಯಾಗಿದೆ ಎಂದು ಕಾಂಗ್ರೆಸ್ ಹಿರಿಯ ನಾಯಕ ಆರ್.ವಿ.ದೇಶಪಾಂಡೆ ಹೇಳಿರುವುದು ರಾಜ್ಯ ಸರ್ಕಾರದ ಅವೈಜ್ಞಾನಿಕ ನೀತಿಗಳು ರಾಜ್ಯವನ್ನು ಹೇಗೆ ಅಧೋಗತಿಗೆ ತಳ್ಳಿದೆ ಎನ್ನುವುದಕ್ಕೆ ಮತ್ತೊಮ್ಮೆ ಕನ್ನಡಿ ಹಿಡಿದಿದಂತಾಗಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್ ಅಶೋಕ್ ಸರ್ಕಾರದ ವಿರುದ್ದ ಟೀಕಾ ಪ್ರಹಾರ ನಡೆಸಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಸರ್ಕಾರದ ವಿರುದ್ದ ಸಾಲು ಸಾಲು ಪೋಸ್ಟ್ ಮಾಡಿ ಆಕ್ರೋಶ ಹೊರಹಾಕಿರುವ ಅವರು, ಇನ್ನೆಷ್ಟು ದಿನ ಈ ಭಂಡ ಬಾಳು ಸಿ.ಎಂ ಸಿದ್ದರಾಮಯ್ಯನವರೇ ಸಾಕು ನಿಮ ದುರಾಡಳಿತ. ರಾಜೀನಾಮೆ ಕೊಟ್ಟು ಕರ್ನಾಟಕವನ್ನು ಉಳಿಸಿ ಟೀಕಾ ಪ್ರಹಾರ ನಡೆಸಿದ್ದಾರೆ.

ಹೇಗಾದರೂ ಮಾಡಿ ಅಧಿಕಾರ ಹಿಡಿಯಬೇಕು ಎನ್ನುವ ಹಪಹಪಿಯಿಂದ ಬೇಕಾಬಿಟ್ಟಿ ಗ್ಯಾರಂಟಿ ಯೋಜನೆಗಳನ್ನು ಮಾಡಿದ ಕಾಂಗ್ರೆಸ್ ಪಕ್ಷಕ್ಕೆ ಈಗ ಗ್ಯಾರಂಟಿಗಳು ಬಿಸಿ ತುಪ್ಪವಾಗಿದೆ ಎಂದು ವಾಗ್ದಳಿ ನಡೆಸಿದ್ದಾರೆ.ಸಿಎಂ ಸಿದ್ದರಾಮಯ್ಯ ಸರ್ಕಾರ ಪಾಪರ್ ಆಗಿದೆ ಎನ್ನುವ ಕೂಗು ಕಾಂಗ್ರೆಸ್ ಪಕ್ಷದಲ್ಲೆ ಏಳುತ್ತಿದ್ದು ಈ ಹಿಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೇ ಸರ್ಕಾರದ ಬಳಿ ರಸ್ತೆಗೆ ಒಂದು ಬುಟ್ಟಿ ಮಣ್ಣು ಹಾಕಲೂ ದುಡ್ಡಿಲ್ಲ ಎಂದು ಒಪ್ಪಿಕೊಂಡಿದ್ದರು. ಸಿದ್ದರಾಮಯ್ಯನವರ ಆರ್ಥಿಕ ಸಲಹೆಗಾರ ಹಿರಿಯ ಶಾಸಕ ಬಸವರಾಜ ರಾಯರೆಡ್ಡಿ ಅವರು ರಸ್ತೆ ಬೇಕು ಅಂದರೆ ಗ್ಯಾರಂಟಿ ಸ್ಕಿಮ್ ಬಂದ್ ಮಾಡಬೇಕಾಗುತ್ತದೆ ಎಂದು ಹೇಳಿದ್ದರು ಎಂಬುದನ್ನು ನೆನಪಿಸಿಕೊಟ್ಟಿದ್ದಾರೆ.

ಈಗ ಕಾಂಗ್ರೆಸ್ ಪಕ್ಷದ ಅತ್ಯಂತ ಹಿರಿಯ ಶಾಸಕರು, ಮಾಜಿ ಸಚಿವರಾದ ಆರ್.ವಿ.ದೇಶ್‌ಪಾಂಡೆ ಅವರು ನಾನು ಮುಖ್ಯಮಂತ್ರಿ ಆಗಿದ್ದರೆ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುತ್ತಿರಲಿಲ್ಲ ಎಂದು ಹೇಳಿರುವುದು ಸಿಎಂ ಅವರು ಎಷ್ಟು ಅಸಮರ್ಥ ಮುಖ್ಯಮಂತ್ರಿ ಎನ್ನುವುದನ್ನ ಮತ್ತೊಮ್ಮೆ ಸಾಬೀತು ಮಾಡಿದೆ ಎಂದು ವಾಗ್ದಳಿ ನಡೆಸಿದ್ದಾರೆ.ಮತ್ತೊಂದು ಪೋಸ್ಟ್‌ನಲ್ಲಿ ಕಾಂಗ್ರೆಸ್ ಸರ್ಕಾರದ ರಾಜಕೀಯ ತೆವಲಿಗೆ ಇಡೀ ರಾಜ್ಯದ ಆಡಳಿತ ಯಂತ್ರ ಸಂಪೂರ್ಣ ಸ್ತಬ್ಧವಾಗಿದ್ದು, ಜಾತಿಗಣತಿ ಸಮೀಕ್ಷಾ ಕಾರ್ಯಕ್ಕೆ ಸಿಬ್ಬಂದಿ ನಿಯೋಜನೆ ಮಾಡಿರುವ ಹಿನ್ನೆಲೆಯಲ್ಲಿ ಜನಸಾಮಾನ್ಯರು ತಮ ದಿನನಿತ್ಯದ ಕೆಲಸಗಳಿಗಾಗಿ ಪಡದಾಡುವ ಎದುರಾಗಿದೆ ಎಂದು ಸರ್ಕಾರದ ಗಮನ ಸೆಳೆದಿದ್ದಾರೆ.ಶಾಲೆಗಳಲ್ಲಿ ಶಿಕ್ಷಕರಿಲ್ಲ, ಬೆಸ್ಕಾಂ, ಬಿಡಬ್ಲುಎಸ್ ಎಸ್ ಕಚೇರಿಗಳಲ್ಲಿ ಸಿಬ್ಬಂದಿ ಇಲ್ಲ.ಆರ್ ಟಿಓ ಕಚೇರಿಗಳಲ್ಲಿ ಸಿಬ್ಬಂದಿ ಇಲ್ಲ. ಸಿಎಂ ಸಿದ್ದರಾಮಯ್ಯ ನವರೇ, ತಮ ಕುರ್ಚಿ ಉಳಿಸಿಕೊಳ್ಳುವ ನಾಟಕಕ್ಕೆ ಕನ್ನಡಿಗರು ಶಿಕ್ಷೆ ಅನುಭವಿಸುತ್ತಿದ್ದಾರೆ. ಡಿನ್ನರ್ ಮೀಟಿಂಗ್ ಮಾಡುವ ಬದಲು ಒಮೆ ಬೀದಿಗಿಳಿದು ಜನರ ಅಭಿಪ್ರಾಯ ಕೇಳಿ. ಜನ ತಮ ಕಾಂಗ್ರೆಸ್ ಸರ್ಕಾರಕ್ಕೆ ಹಿಡಿ ಶಾಪ ಹಾಕುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಇನ್ನೊಂದು ಪೋ ಸ್ಟ್‌ನಲ್ಲಿ ಮತ್ತೊಮ್ಮೆ ಸಾರಿಗೆ ಮುಷ್ಕರದ ಬರೆ!ಕಾಂಗ್ರೆಸ್ ಸರ್ಕಾರದಿಂದ ಕನ್ನಡಿಗರಿಗೆ ದೀಪಾವಳಿ ಉಡುಗೊರೆ!ಈ ಬಾರಿ ದೀಪಾವಳಿ ಹಬ್ಬಕ್ಕೆ ಜನಸಾಮಾನ್ಯರು ಊರಿಗೆ ಹೋಗಲು ಬಸ್ಸಿಗಾಗಿ ಪರದಾಡಬೇಕಾದ ಪರಿಸ್ಥಿತಿ ಎದುರಾಗುವ ಎಲ್ಲ ಲಕ್ಷಣಗಳೂ ಕಾಣುತ್ತಿವೆ ಎಂದು ಎಚ್ಚರಿಸಿದ್ದಾರೆ.ತಮ ಬೇಡಿಕೆ ಈಡೇರಿಸದಿದ್ದರೆ ಮತ್ತೊಮ್ಮೆ ಅಕ್ಟೊಬರ್ 15ರಿಂದ ಮುಷ್ಕರ ನಡೆಸುವುದಾಗಿ ಸಾರಿಗೆ ನಿಗಮಗಳ ನೌಕರರು ಎಚ್ಚರಿಕೆ ನೀಡಿದ್ದು, ಕಾಂಗ್ರೆಸ್ ಸರ್ಕಾರ ಈಗಲಾದರೂ ಎಚ್ಚೆತ್ತುಕೊಂಡು ಸಾರಿಗೆ ನೌಕರರ ಬೇಡಿಕೆ ಈಡೇರಿಸಲು ಮುಂದಾಗಬೇಕು ಎಂದು ಸಲಹೆ ನೀಡಿದ್ದಾರೆ. ಬಸ್ಸುಗಳ ನಿರ್ವಹಣೆಗೂ ದುಡ್ಡಿಲ್ಲ. ಸಾರಿಗೆ ನೌಕರರ ಸಂಬಳ, ಹಿಂಬಾಕಿ ಪಾವತಿಗೂ ದುಡ್ಡಿಲ್ಲ. ಬಸ್ ನಿಲ್ದಾಣಗಳ ನಿರ್ವಹಣೆ ಗೂ ದುಡ್ಡಿಲ್ಲ. ಒಟ್ಟಿನಲ್ಲಿ ಪಾಪರ್ ಕಾಂಗ್ರೆಸ್ ಸರ್ಕಾರದ ದುರಾಡಳಿತದಿಂದ ಸಾರಿಗೆ ನಿಗಮಗಳ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದ್ದು, ಯಾವುದಕ್ಕೂ ದುಡ್ಡಿಲ್ಲ ಎನ್ನುವ ದುಸ್ಥಿತಿ ಎದುರಾಗಿದೆ ಎಂದು ಆರೋಪ ಮಾಡಿದ್ದಾರೆ.

ಖಾಸಗಿ ಶಾಲೆಯ ಮಕ್ಕಳು ದಸರಾ ರಜೆ ನಂತರ ಶಾಲೆಗೆ ಮರಳಿ ಪಾಠ, ಕಲಿಕೆಯಲ್ಲಿ ತೊಡಗಿದ್ದರೆ ಸರ್ಕಾರಿ ಶಾಲೆಯ ಮಕ್ಕಳು ಪಾಠವಿಲ್ಲದೆ ಸೊರಗುತ್ತಿದ್ದಾರೆ. ಸಿದ್ದರಾಮಯ್ಯ ನವರೇ, ತಮ ರಾಜಕೀಯ ತೆವಲಿಗೆ ಪಾಪ ಸರ್ಕಾರಿ ಶಾಲೆಯ ಬಡ ಮಕ್ಕಳು ಶಿಕ್ಷೆ ಅನುಭವಿಸುವಂತಾಗಿದೆ. ಎಸೆಸೆಲ್ಸಿಯಂತಹ ನಿರ್ಣಾಯಕ ಘಟ್ಟದಲ್ಲಿರುವ ವಿದ್ಯಾರ್ಥಿಗಳು ಒಂದು ತಿಂಗಳು



ಶಾಲೆಯಿಂದ ಹೊರಗೆ ಉಳಿದರೆ ಅವರ ಕಲಿಕಾ ಮಟ್ಟದ ಮೇಲೆ ದುಷ್ಪರಿಣಾಮ ಬೀರುವುದಿಲ್ಲವೇ? ಇದು ಅವರ ಫಲಿತಾಂಶದ ಮೇಲೆ ಪರಿಣಾಮ ಬೀರಿದರೆ ಅವರ ಭವಿಷ್ಯಕ್ಕೆ ಪೆಟ್ಟು ಬೀಳುವುದಿಲ್ಲವೇ? ಎಂದು ಪ್ರಶ್ನೆ ಮಾಡಿದ್ದಾರೆ.ನಿಮ ರಾಜಕೀಯ ತೆವಲಿಗೆ ಮಕ್ಕಳ ಭವಿಷ್ಯ ಹಾಳು ಮಾಡಬೇಡಿ. ಎಸೆಸೆಲ್ಸಿ ಶಿಕ್ಷಕರಿಗೆ ಸಮೀಕ್ಷೆಯಿಂದ ವಿನಾಯಿತಿ ನೀಡಿ ಈ ಕೂಡಲೇ ಶಾಲೆ ಪುನರಾರಂಭಿಸಿ. ನಿಮ ಕುರ್ಚಿ ಉಳಿಸಿಕೊಳ್ಳಲು ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟವಾಡಬೇಡಿ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.ಯಾವುದೇ ಪೂರ್ವಸಿದ್ಧತೆ ಇಲ್ಲದ ತರಾತುರಿಯ ಕುರ್ಚಿ ಬಚಾವೋ ಜಾತಿಗಣತಿ ಸಮೀಕ್ಷೆಗೆ ಸರ್ಕಾರಿ ಶಾಲಾ ಶಿಕ್ಷಕರನ್ನು ನಿಯೋಜನೆ ಮಾಡಿ ಒಂದು ತಿಂಗಳು ಸರ್ಕಾರಿ ಶಾಲೆಗಳಿಗೆ ಬೀಗ ಜಡಿದು ವಿದ್ಯಾರ್ಥಿಗಳ ಭವಿಷ್ಯ ಹಾಳು ಮಾಡಿದ್ದಾಯ್ತು, ಈಗ ಅಂಗನವಾಡಿ ಕಾರ್ಯಕರ್ತೆಯರನ್ನೂ ಸಮೀಕ್ಷೆ ಕಾರ್ಯಕ್ಕೆ ನಿಯೋಜನೆ ಮಾಡಿ ಹಳ್ಳಿಗಾಡಿನ ಬಡ ಮಕ್ಕಳ ಹೊಟ್ಟೆಗೆ ತಣ್ಣೀರು ಬಟ್ಟೆ ಹಾಕಿದೆ/ಈ ನಾಲಾಯಕ್ ಕಾಂಗ್ರೆಸ್ ಸರ್ಕಾರ.

ಸಿದ್ದರಾಮಯ್ಯ ನವರೇ, ನಿಮ ಜಾತಿಗಣತಿ ನಾಟಕದಿಂದ ಸಾರ್ವಜನಿಕರಿಗೆ ಎಷ್ಟು ತಿಂದರೆ ಆಗುತ್ತಿದೆ ಎನ್ನುವ ಬಗ್ಗೆ ನಿಮಗೆ ಅರಿವೇ ಇಲ್ಲ. ನಿಮಗೆ ಕುರ್ಚಿ ಉಳಿಸಿಕೊಳ್ಳುವ ಹಠ, ಕನ್ನಡಿಗರಿಗೆ ಪರದಾಟ. ನಿಮ ನಾಲಾಯಕ್ ಸರ್ಕಾರ ಯಾವಾಗ ತೊಲಗುತ್ತೊ? ಎಂದು ಕನ್ನಡಿಗರು ಎದುರು ನೋಡುತ್ತಿದ್ದಾರೆ ಎಂದು ಅಶೋಕ್ ಸರ್ಕಾರದ ವಿರುದ್ದ ಕಿಡಿಕಾರಿದ್ದಾರೆ.

# ವನ್ಯಜೀವಿ ಮತ್ತು ಅರಣ್ಯ ಸಂರಕ್ಷಣೆ ಎಲ್ಲರ ಜವಾಬ್ದಾರಿ: ಕಾಳೆ

**ಆಳಂದ:ಅ.13–** "ಅರಣ್ಯ ಮತ್ತು ವನ್ಯಜೀವಿಗಳು ನಮ್ಮ ಪರಿಸರದ ಜೀವಾಳ. ಪ್ರಕೃತಿಯ ಸಮತೋಲನ ಕಾಪಾಡುವುದು ಪ್ರತಿ ನಾಗರಿಕನ ಕರ್ತವ್ಯವಾಗಿದೆ. ಅರಣ್ಯಗಳ ನಾಶ ಮತ್ತು ವನ್ಯಜೀವಿಗಳ ಬೇಟೆ ಇಂದಿನ ಗಂಭೀರ ಸಮಸ್ಯೆಗಳಾಗಿವೆ. ಜನರಲ್ಲಿ ಜಾಗೃತಿ ಮೂಡಿಸಿದಾಗ ಮಾತ್ರ ನಾಶದ ದಾರಿಯಿಂದ ನಾವು ಹಿಂತಿರುಗಬಹುದು," ಎಂದು ಪ್ರಾದೇಶಿಕ ಅರಣ್ಯ ಇಲಾಖೆಯ ಭೂಸನೂರ ವಲಯದ ಉಪ ಅರಣ್ಯ ಸಂರಕ್ಷಣಾಧಿಕಾರಿ ತುಕ್ಕಪ್ಪ ಕಾಳೆ ಹೇಳಿದರು.

ತಾಲೂಕಿನ ಕಡಗಂಚಿ ಬಳಿಯ ಮೌಂಟ್ ಕಾರ್ಮೆಲ್ ಶಾಲೆಯಲ್ಲಿ ವನ್ಯಜೀವಿ ಹಾಗೂ ಅರಣ್ಯ ಸಂರಕ್ಷಣಾ ಜಾಗೃತಿ ಕಾರ್ಯಕ್ರಮದಲ್ಲಿ ಸಸಿಗಳಿಗೆ ನೀರುಣಿಸಿ ಮಾತನಾಡಿದರು.

ಅರಣ್ಯಗಳು ಮಳೆಯ ಮೂಲ, ನದಿಗಳ ಜೀವನಾಡಿ ಮತ್ತು ಮಾನವ ಬದುಕಿನ ಆಧಾರ. ಅರಣ್ಯ ಸಂರಕ್ಷಣೆ ಎಂದರೆ ಕೇವಲ ಮರ ನೆಡುವುದಲ್ಲ, ಅವುಗಳನ್ನು ಕಾಯ್ದುಕೊಳ್ಳುವುದು ಮತ್ತು ವನ್ಯಜೀವಿಗಳಿಗೆ ಸುರಕ್ಷಿತ ವಾಸಸ್ಥಳ ಒದಗಿಸುವುದೂ ಮುಖ್ಯ. ಸರ್ಕಾರವು ಹಲವು ಯೋಜನೆಗಳ ಮೂಲಕ ಅರಣ್ಯ ವಿಸ್ತರಣೆ ಮತ್ತು ಸಂರಕ್ಷಣೆಗೆ ಕ್ರಮ ಕೈಗೊಂಡಿದೆ. ಆದರೆ ಜನರ ಸಹಕಾರವಿಲ್ಲದೆ ಯಾವುದೇ ಯೋಜನೆ ಯಶಸ್ವಿಯಾಗುವುದಿಲ್ಲ ಎಂದು ಹೇಳಿದರು.

ಅರಣ್ಯಗಳನ್ನು ನಾವು ಬೆಳೆಸಲಾಗದಿದ್ದರೂ, ಅವನ್ನು ನಾಶಪಡಿಸದಿರುವುದಲ್ಲದೆ ರಕ್ಷಿಸುವ ಮೂಲಕ ನಾವು ಮಹತ್ವದ ಕೊಡುಗೆ ನೀಡ ಬಹುದು. ಅರಣ್ಯಗಳು ಭೂಮಿಯ "ಆಮ್ಲಜನಕ ಟ್ಯಾಂಕ್‌ಗಳು" ಆಗಿದ್ದು, ಅವುಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂದು ಹೇಳಿದರು. ಆಳಂದ ವಲಯದ ಪ್ರಾದೇಶಿಕ ಉಪ ಅರಣ್ಯಾಧಿಕಾರಿ ಸಿದ್ದಲಿಂಗ ಚಿಂಚೋಳಿ ವಿದ್ಯಾರ್ಥಿಗಳಿಗೆ ಉದ್ದೇಶಿಸಿ, "ನೀವು ನಾಳೆಯ ನಾಗರಿಕರು. ಅರಣ್ಯ ಹಾಗೂ ವನ್ಯಜೀವಿಗಳ ಮೌಲ್ಯವನ್ನು ಅರಿತು ಪರಿಸರ ಸಂರಕ್ಷಣೆಯಲ್ಲಿ ಭಾಗವಹಿಸಿ. ಒಂದು ಮರ ನೆಡುವುದು ಅಂದರೆ ಒಂದು ಜೀವ ಉಳಿಸುವಂತಾಗಿದೆ," ಎಂದು ಮನವಿ ಮಾಡಿದರು. ಅರಣ್ಯ ಗಾರ್ಡ್ ಹೈದರ್ ಅಲಿ ಉಪಸ್ಥಿತರಿದ್ದರು.



ಕಾರ್ಯಕ್ರಮದ ಅಂಗವಾಗಿ ಶಾಲಾ ಮಕ್ಕಳಿಗೆ ರೆಖಾಚಿತ್ರ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಅರಣ್ಯ ಅಧಿಕಾರಿಗಳಿಂದ ಬಹುಮಾನಗಳನ್ನು ವಿತರಿಸಲಾಯಿತು. ಪ್ರಾಚಾರ್ಯ ಫಾ. ಸಂದೀಪ್, ಹಾಗೂ ಶಾಲೆಯ ಶಿಕ್ಷಕ ವೃಂದ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬಸ್‌ನಲ್ಲಿ ವೈದ್ಯೆಗೆ ಲೈಂಗಿಕ ಕಿರುಕುಳ ಕಾಮುಕನ ಬಂಧನ

**ಬೆಂಗಳೂರು,ಅ.13–** ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ವೈದ್ಯೆಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ ಕಾಮುಕನನ್ನು ಚಾಲಕ ಹಾಗೂ ಪ್ರಯಾಣಿಕರು ಹಿಡಿದು ಸಂಜಯನಗರ ಪೊಲೀಸರಿಗೆ ಒಪ್ಪಿಸಿದ್ದಾರೆ. ಕಾಮುಕ ಫಿರೋಜ್ ಖಾನ್ ನನ್ನು ಬಂಧಿಸಿರುವ ಸಂಜಯನಗರ ಪೊಲೀಸರು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

ದೊಡ್ಡಬಳ್ಳಾಪುರದಿಂದ ಬೆಂಗಳೂರಿಗೆ ಕೆಎ –04–ಎಫ್ – 1543 ಕೆ ಎಸ್ ಆರ್ಟಿಸಿ ಬಸ್ ನಲ್ಲಿ ವೈದ್ಯೆಯ ಪಕ್ಕದಲ್ಲಿ ಸೀಟು ಖಾಲಿಯಿದ್ದು,ಅದನ್ನು ಕಂಡ ಆರೋಪಿ ಫಿರೋಝ್ ಖಾನ್ ಬಂದು ಕುಳಿತಿದ್ದ. ನಂತರ ಖಾಸಗಿ ಭಾಗಕ್ಕೆ ಸ್ಪರ್ಶಿಸಿ ಕಾಮುಕತೆ ಮೆರೆದಿದ್ದ. ವೈದ್ಯೆ ಎಷ್ಟೇ ಪ್ರತಿರೋಧ ತೋರಿದರೂ ಮತ್ತೆ ಮತ್ತೆ ಕಿರಿಕುಳ ಕೊಡುತ್ತಿದ್ದ. ಅವನ ಕಾಟದಿಂದ ಬೇಸತ್ತ ಮಹಿಳೆ ತನ್ನ ಸಹೋದರನಿಗೆ ಮತ್ತು ಬಸ್ ಡ್ರೈವರ್ ಗೆ ಮಾಹಿತಿ ನೀಡಿದ್ದಾರೆ. ಕೂಡಲೇ ವೈದ್ಯೆಯ ಸಹೋದರ ಪೊಲೀಸರಿಗೆ ಕರೆ ಮಾಡಿ ವಿಷಯ ಮುಟ್ಟಿಸಿದ್ದಾನೆ.

ವಿಷಯ ತಿಳಿಯುತ್ತಿದ್ದಂತೆ ತಪ್ಪಿಸಿಕೊಳ್ಳಲು ಪ್ರಯತ್ನ ಪಟ್ಟ ಕಾಮುಕನನ್ನು ಪ್ರಯಾಣಿಕರು ಮತ್ತು ಕಂಡಕ್ಟರ್ ಸೇರಿ ಹಿಡಿದಿದ್ದು, ಸಂಜಯ್ ನಗರದ ಪೊಲೀಸರಿಗೆ ಒಪ್ಪಿಸಿದ್ದಾರೆ. ಆರೋಪಿಯ ವಿರುದ್ಧ ಕಿರುಕುಳಕ್ಕೊಳಗಾದ ವೈದ್ಯೆ ದೂರು ನೀಡಿದ್ದು, ಪೊಲೀಸರು ಕ್ರಮ ಕೈಗೊಂಡಿದ್ದಾರೆ.

# ಶ್ರೀ ಮಹರ್ಷಿ ವಾಲ್ಮೀಕಿ ಜಯಂತೋತ್ಸವ: ಗಿಲ್ಲೆ ಸೂಗೂರಲ್ಲಿ ಅದ್ದೂರಿ ಆಚರಣೆ

**ಯುವ ಮಾರ್ಗ ಸುದ್ದಿ**

**ಗಿಲ್ಲೆಸೂಗೂರು,ಅ.13–** ರವಿವಾರದಂದು ಗಿಲ್ಲೆ ಸೂಗೂರು ಹೋಬಳಿಗೆ ಸಂಬಂಧಿಸಿದ ಎಲ್ಲಾ ಹಳ್ಳಿಗಳ ವಾಲ್ಮೀಕಿ ಸಮುದಾಯದ ಬಂಧುಗಳು ಸೇರಿ ಶ್ರೀ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅದ್ದೂರಿಯಿಂದ ಆಚರಿಸಿದರು.

ಈ ಅಂಗವಾಗಿ, ಶ್ರೀಆಂಜನೇಯ ಸ್ವಾಮಿ ದೇವಸ್ಥಾನದಿಂದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದವರೆಗೆ ಶ್ರೀ ಆದಿಕವಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದೊಂದಿಗೆ ಭವ್ಯ ಮೆರವಣಿಗೆಯನ್ನು ನಡೆಸಲಾಯಿತು. ಮೆರವಣಿಗೆಯಲ್ಲಿ ಮಹಿಳೆಯರ ಕುಂಭಮೇಳ, ಡೊಳ್ಳು ಬಾಜಾ ಸಮೂಹ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಗಿಲ್ಲೆ ಸೂಗೂರು ಹಾಗೂ ಸುತ್ತಮುತ್ತಲಿನ ಹಳ್ಳಿಗಳ ವಾಲ್ಮೀಕಿ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಹಬ್ಬದ ಸಂಭ್ರಮವನ್ನು ಹೆಚ್ಚಿಸಿದರು.

ಕಾರ್ಯಕ್ರಮದ ಯಶಸ್ಸಿಗೆ ಶ್ರೀ



ಆಂಜನೇಯ ಸ್ವಾಮಿ ಯುವ ಮಂಡಳಿ, ವಾಲ್ಮೀಕಿ ಸಮಾಜದ ಬಂಧುಗಳು, ಊರಿನ ಹಿರಿಯ ಮುಖಂಡರು, ಯುವಕರು, ಮಹಿಳಾ ವಾಲ್ಮೀಕಿ ಅಕ್ಕ–ತಂಗಿಯರು, ಹಾಗೂ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಸದಸ್ಯರು ಮುಖ್ಯ ಕಾರ್ಯಕರ್ತರಾಗಿ ಶ್ರಮಿಸಿದರು. ಎಲ್ಲರೂ ಒಟ್ಟಾಗಿ ಸೇರಿ ಮೆರವಣಿಗೆಯ ಮೂಲಕ ಜಯಂತಿಯನ್ನು ಸಂಭ್ರಮದಿಂದ ಆಚರಿಸಿದರು.

# ಕರೂರು ಕಾಲ್ತುಳಿತ ಪ್ರಕರಣದ ಕುರಿತು ಸಿಬಿಐ ತನಿಖೆ ಮೇಲುಸ್ತುವಾರಿಗೆ ಸಮಿತಿ ನೇಮಕ ಮಾಡಿದ ಸುಪ್ರೀಂ



**ನವದೆಹಲಿ, ಅ.13–** ತಮಿಳುನಾಡಿನ ಸೂಪರ್ ಸ್ಟಾರ್ ವಿಜಯ್ ಭಾಷಣದ ವೇಳೆ ಕರೂರಿನಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ 41 ಅಮಾಯಕರು ಪ್ರಾಣ ಕಳೆದುಕೊಂಡ ಘಟನೆ ಸತ್ಯಾಸತ್ಯತೆ ಅರಿಯಲು ಸುಪ್ರಿಂ ಕೋರ್ಟ್ ಸಿಬಿಐ ತನಿಖೆಗೆ ಆದೇಶಿಸಿದೆ.

ನ್ಯಾಯಾಧೀಶರಾದ ಜೆ ಕೆ ಮಹೇಶ್ವರಿ ಮತ್ತು ಎನ್ ವಿ ಅಂಜಾರಿಯಾ ಅವರನ್ನೊಳಗೊಂಡ ಪೀಠವು ಸಿಬಿಐ ತನಿಖೆಯನ್ನು ಮೇಲ್ವಿಚಾರಣೆ ಮಾಡುವ ಸಮಿತಿಯ ಮುಖ್ಯಸ್ಥರನ್ನಾಗಿ ಸುಪ್ರಿಂ ಕೋರ್ಟ್‌ನ ಮಾಜಿ ನ್ಯಾಯಾಧೀಶ ಅಜಯ್ ರಸ್ತೊಗಿ ಅವರನ್ನು ನೇಮಿಸಿದೆ.

ತಮಿಳು ನಟ ವಿಜಯ್ ಅವರ ರಾಜಕೀಯ ಪಕ್ಷವಾದ ತಮಿಳಗ ವೆಟ್ರಿ ಕಳಗಂ ಮತ್ತು ಇತರರು ಸಲ್ಲಿಸಿದ ಅರ್ಜಿಯ ಕುರಿತು ಸುಪ್ರಿಂ ಕೋರ್ಟ್ ಅಕ್ಟೊಬರ್ 10 ರಂದು ತನ್ನ ಆದೇಶವನ್ನು ಕಾಯ್ದಿರಿಸಿತ್ತು.ಸೆಪ್ಟೆಂಬರ್ 27 ರ ಕಾಲ್ತುಳಿತದ ಬಗ್ಗೆ ಸಿಬಿಐ ತನಿಖೆಗೆ ನಿರಾಕರಿಸಿದ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಬಿಜೆಪಿ ನಾಯಕಿ ಉಮಾ ಆನಂದನ್ ಸಲ್ಲಿಸಿದ ಅರ್ಜಿಯನ್ನು ಮಂಗಳವಾರ ವಿಚಾರಣೆಗೆ ಸಿಜೆಐ ನೇತೃತ್ವದ ಪೀಠ ಒಪ್ಪಿಕೊಂಡಿತು.

ತಮಿಳುನಾಡಿನ ಬಿಜೆಪಿ ನಾಯಕ ಜಿ ಎಸ್ ಮಣಿ ಕೂಡ ಕಾಲ್ತುಳಿತದ ಬಗ್ಗೆ ಸಿಬಿಐ ತನಿಖೆಗೆ ಕೋರಿ ಅರ್ಜಿ ಸಲ್ಲಿಸಿದ್ದಾರೆ.ಟಿವಿಕೆ ಸುಪ್ರಿಂ ಕೋರ್ಟ್‌ನ ಮೇಲ್ವಿಚಾರಣೆಯಲ್ಲಿ ಸ್ವತಂತ್ರ ತನಿಖೆಯನ್ನು ಕೋರಿದೆ, ತಮಿಳುನಾಡು ಪೊಲೀಸ್ ಅಧಿಕಾರಿಗಳು ಮಾತ್ರ ನಡೆಸಿದರೆ ನ್ಯಾಯ ಯುತ ಮತ್ತು ನಿಷ್ಪಕ್ಷಪಾತ ತನಿಖೆ ಸಾಧ್ಯವಿಲ್ಲ ಎಂದು ವಾದಿಸಿದೆ.

ತಮಿಳುನಾಡು ಪೊಲೀಸ್ ಅಧಿಕಾರಿಗಳನ್ನು ಮಾತ್ರ ಒಳಗೊಂಡ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಹೈಕೋರ್ಟ್ ನೀಡಿದ್ದ ತೀರ್ಪನ್ನು ಟಿವಿಕೆ ತನ್ನ ಅರ್ಜಿಯಲ್ಲಿ ಆಕ್ಷೇಪ ವ್ಯಕ್ತಪಡಿಸಿತ್ತು.ಕೆಲವು ದುಷ್ಕರ್ಮಿಗಳು ಪೂರ್ವ ಯೋಜಿತ ಪಿತೂರಿಯಿಂದ ಕಾಲ್ತುಳಿ ತಕ್ಕೆ ಕಾರಣರಾಗಿದ್ದಾರೆ ಎಂದು ಅದು ಆರೋಪಿಸಿದೆ.ಘಟನೆಯ ನಂತರ ಪಕ್ಷ ಮತ್ತು ನಟ–ರಾಜಕಾರಣಿ ಸ್ಥಳದಿಂದ ಹೊರಟು ಯಾವುದೇ ಪಶ್ಚಾತ್ತಾಪ ವ್ಯಕ್ತಪಡಿಸಲಿಲ್ಲ ಎಂಬ ಹೈಕೋರ್ಟ್‌ನ ಕಟುವಾದ ಹೇಳಿಕೆಯನ್ನು ಸಹ ಅರ್ಜಿಯಲ್ಲಿ ಆಕ್ಷೇಪಿಸಲಾಗಿದೆ.

ಈ ಹಿಂದೆ, ರ್ಯಾಲಿಯಲ್ಲಿ 27,000 ಜನರು ಭಾಗವಹಿಸಿದ್ದರು, ಇದು ನಿರೀಕ್ಷಿತ 10,000 ಭಾಗವಹಿಸುವವರ ಸಂಖ್ಯೆಗಿಂತ ಸುಮಾರು ಮೂರು ಪಟ್ಟು ಹೆಚ್ಚು, ಮತ್ತು ದುರಂತಕ್ಕೆ ವಿಜಯ್ ಸ್ಥಳವನ್ನು ತಲುಪುವಲ್ಲಿ ಏಳು ಗಂಟೆಗಳ ವಿಳಂಬವೂ ಕಾರಣವಾಗಿತ್ತು ಎಂದು ಪೊಲೀಸರು ದೂಷಿಸಿದ್ದರು.

# ಬಾಲಕಿಗೆ ಲೈಂಗಿಕ ಕಿರುಕುಳ ಬಂಧನಕ್ಕೆ ಹೆದರಿ ವೃದ್ಧ ಆತ್ಮಹತ್ಯೆ

**ಬೆಂಗಳೂರು,ಅ.13–**ನಾಲ್ಕನೇ ತರಗತಿ ಓದುತ್ತಿದ್ದ 9 ವರ್ಷದ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ವೃದ್ಧನೋರ್ವ ಪೊಲೀಸರ ಬಂಧನಕ್ಕೆ ಭಯ ಬಿದ್ದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕೆಂಗೇರಿಯ ಗಣಕಲ್ ನಲ್ಲಿ ನಡೆದಿದೆ. ಬಾಗಲಕೋಟೆ ಜಿಲ್ಲೆಯ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಅಂಬರೀಶ್ (65) ಆತ್ಮಹತ್ಯೆ ಮಾಡಿಕೊಂಡವರು, 9 ವರ್ಷದ ಬಾಲಕಿಗೆ ಒಂದು ವಾರದ ಹಿಂದೆ ಲೈಂಗಿಕ ಕಿರುಕುಳ ನೀಡಿದ್ದರು. ಇದನ್ನು ತಿಳಿದ ಬಾಲಕಿಯ ಪೋಷಕರು ಪೊಲೀಸ್ ಠಾಣೆಗೆ ದೂರು ನೀಡಿರುವ ಸುದ್ಧಿ ತಿಳಿದು ಭಯ ಬಿದ್ದು ಶೌಚಾಲಯ ಸ್ವಚ್ಛಗೊಳಿಸುವ ಹಾರ್ಪಿಕ್ ಕುಡಿದು ಅಸ್ವಸ್ಥಗೊಂಡಿದ್ದರು. ಕೂಡಲೇ ಆತನನ್ನು ಬಿಜಿಎಸ್ ಆಸ್ಪತ್ರೆಗೆ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುತ್ತಾನೆ. ಈತನ ವಿರುದ್ಧ ಕೆಂಗೇರಿ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

# ಜಿಲ್ಲೆಕಲಬುರಗಿಕ್ರೈಂ ಸುದ್ದಿಗಳು ವರದಕ್ಷಿಣೆ ಕಿರುಕುಳ; ಮಹಿಳೆ ದೂರು

**ಕಲಬುರಗಿ,ಅ.13–**ತವರು ಮನೆಯಿಂದ ಇನ್ನೂ ಹೆಚ್ಚಿನ ವರ 'ದಕ್ಷಿಣೆ ತರುವಂತೆ ಗಂಡ ಮತ್ತು ಆತನ ಮನೆಯವರು ಕಿರುಕುಳ ನೀಡಿದ ಬಗ್ಗೆ ಮಹಿಳೆಯೊಬ್ಬರು ಇಲ್ಲಿನ ಮಹಿಳಾ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.ನಗರದ ಎಂಎಸ್‌ಕೆಮಿಲ್ ಏರಿಯಾದ ಆರೀಫ್ ಕಾಲೋ ನಿಯ ನಸರೀನ್ ಬೇಗಂ ಎಂಬುವವರೆ ಪತಿ ಸಿರಾಜ್ ಹಜಾರೆ ಮತ್ತು ಅವರ ಮನೆಯವರ ವಿರುದ್ಧ ದೂರು ಸಲ್ಲಿಸಿದ್ದಾರೆ.ಮದುವೆ ಸಂದರ್ಭದಲ್ಲಿ 2.5 ತೊಲೆ ಬಂಗಾರ, 1 ಲಕ್ಷ ರೂ.ನಗದು, ಬೆಲೆಬಾಳುವ ಬಟ್ಟೆ ಬರೆ, ಗೃಹ ಬಳಕೆಯ ಸಾಮಾನುಗಳನ್ನು ಕೊಟ್ಟಿದ್ದು, ತವರು ಮನೆಯಿಂದ ಇನ್ನೂ 3 ಲಕ್ಷ ರೂ.ವರದಕ್ಷಿಣೆ ತರುವಂತೆ ಕಿರುಕುಳ ನೀಡುತ್ತಿದ್ದಾರೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ. ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

ಯುವ ಮಾರ್ಗ

ಮಂಗಳವಾರ: 14–10–2025

## ದೇವದುರ್ಗ ಶಾಸಕಿ ಕರೆಮ್ಮ ನಾಯಕ್ ಕಾರು ಅಪಘಾತ : ಸಣ್ಣ ಪುಟ್ಟ ಗಾಯ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಅ.13–** ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಶಾಸಕಿ ಜಿ.ಕರೆಮ್ಮ ನಾಯಕ್‌ರ ಕಾರು ಗೋಲಪಲ್ಲಿ ಬಳಿ ಅಪಘಾತವಾಗಿದ್ದು, ಸಣ್ಣಪುಟ್ಟ ಗಾಯಗಳಾಗಿವೆ ಲಿಂಗಸುಗೂರು ಸಾರ್ವಜನಿಕ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ ಘಟನೆ ಭಾನುವಾರ ಬೆಳಿಗ್ಗೆ ಜರುಗಿದೆ.

ಮದುವೆ ಸಮಾರಂಭಕ್ಕೆಂದು ಕುಟುಂಬ ಸಮೇತ ತೆರಳುತ್ತಿದ್ದ ಶಾಸಕಿ ಕರೆಮ್ಮ ನಾಯಕರ ಕಾರು ಗೋಲಪಲ್ಲಿ ಹೆದ್ದಾರಿ ತಿರುವಿನಲ್ಲಿ ಅಪಘಾತವಾಗಿದೆ. ಕಾರಿನ ಮುಂದಿನ ಸೀಟಿನಲ್ಲಿ ಕುಳಿತಿದ ಶಾಸಕಿಯ ತಲೆಗೆ ಒಳಪೆಟ್ಟಾಗಿದೆ. ಆಸ್ಪತ್ರೆಯಲ್ಲಿ ಸಿಟಿ ಸ್ಕ್ಯಾನ್ ಮಾಡಿದ ವೈದ್ಯಾಧಿಕಾರಿ ಡಾ.ರುದಗೌಡ ಪಾಟೀಲ್, ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಶಾಸಕಿಯವರು ಆರೋಗ್ಯವಾಗಿದ್ದಾರೆ. ಸಣ್ಣಪುಟ್ಟ ಗಾಯಗಳಾಗಿವೆಯಷ್ಟೆ. ಆದಾಗ್ಯೂ ಸಮಾಧಾನಕ್ಕೆ ಬೆಂಗಳೂರಿನ ದೊಡ್ಡ ಆಸತ್ರೆಯಲ್ಲಿ ತಪಾಸಣೆ ಮಾಡಿಸುವಂತೆ ಹೇಳಲಾಗಿದೆ ಎಂದು ಹೇಳಿದರು.

ಶಾಸಕಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿಷಯ ತಿಳಿದ ಸ್ಥಳೀಯ ಶಾಸಕ ಮಾನಪ್ಪ ವಜಲ್ ಹಾಗೂ ಜೆಡಿಎಸ್ ಕಾರ್ಯಕರ್ತರು ಆಸತ್ರೆಯ ಮುಂದೆ ಶಾಸಕಿಯ ಆರೋಗ್ಯ ವಿಚಾರಿಸಿದರು.

## ಮಹಾನಗರ ಪಾಲಿಕೆಯಿಂದ ಟಿ.ಎಸ್.ಪಿ ಕಲ್ಯಾಣ ಕಾರ್ಯಕ್ರಮದಡಿ ಅರ್ಜಿ ಆಹ್ವಾನ

**ರಾಯಚೂರು,ಅ.13–**ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2019–20, 2022–23 ಹಾಗೂ 2023–24, 2024–25ನೇ ಸಾಲಿನ ಎಸ್.ಎಫ್.ಸಿ ನಿಧಿ & ನಗರಸಭೆ ನಿಧಿಯ ಶೇ.29ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ಟಿ.ಎಸ್.ಪಿ ಕಲ್ಯಾಣ ಕಾರ್ಯಕ್ರಮಗಳಲ್ಲಿ ಪಾಲಿಕೆ ವ್ಯಾಪ್ತಿಯ ಅರ್ಹ ಫಲಾನುಭವಿಗಳಿಂದ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ವೈಯಕ್ತಿಕ ಹರಿಯುವ ನೀರು ಶೌಚಾಲಯ ಹೊಂದಿರದ ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ಸೇರಿದ ಪ್ರತಿ ಕುಟುಂಬಕ್ಕೆ ಸ್ವಂತ ಸೆಪ್ಟಿಕ್ ಟ್ಯಾಂಕ್ ಶೌಚಾಲಯ ನಿರ್ಮಾಣಕ್ಕೆ ಗರಿಷ್ಟ 15,000ರೂ.ಗಳಿಗೆ ಮಿತಿಗೊಳಿಸಿ ಮತ್ತು ಯುಜಿಡಿ ಸಂಪರ್ಕ ಹೊಂದುವ ಶೌಚಾಲಯ ನಿರ್ಮಾಣಕ್ಕೆ ಗರಿಷ್ಟ 10,000ರೂ.ಗಳಿಗೆ ನಿಗದಿಪಡಿಸಲಾಗಿದೆ.

**ದಾಖಲಾತಿಗಳು:** ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ್, ಪಾಸ್ ಪೋಟೋ ಅಳತೆಯ ಭಾವ ಚಿತ್ರ–2, ಬ್ಯಾಂಕ್ ಪಾಸ್ ಪುಸ್ತಕ ಹಾಗೂ ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಜಾಗದ ಛಾಯಾಚಿತ್ರ ಹಾಗೂ ಮೋಬೈಲ್ ನಂಬರ್‌ನೊಂದಿಗೆ ಅಕ್ಟೋಬರ್ 29ರ ಸಂಜೆ 5ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.ಅವದಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು.ಹೆಚ್ಚಿನ ಮಾಹಿತಿಗಾಗಿ ಕಚೇರಿಯ ನೋಟಿಸ್ ಬೋರ್ಡ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

**ರಾಯಚೂರು,ಅ.13–** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನ್ಯಾಯದ ವಿರುದ್ಧ ಹೋರಾಟ ಅನಿವಾರ್ಯ : ಉಮೇಶ ಗೌಡ ಅರಳಳ್ಳಿ



ಯುವ ಮಾರ್ಗ ಸುದ್ದಿ

**ಅರಕೇರಾ,ಅ.13–** ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆಗೆ ನಾಗೋಲಿ ಗ್ರಾಮದ ಅಮರೇಶ ದೊರೆ (ರೈತ ಘಟಕದ ಜಿಲ್ಲಾಧ್ಯಕ್ಷರಾಗಿ), ಮಲ್ಲೆದೇವರಗುಡ್ಡ ಗ್ರಾಮದ ಹನುಮಂತ ನಾಯಕ (ತಾಲೂಕು ಅಧ್ಯಕ್ಷರಾಗಿ) ಹಾಗೂ ಪಟ್ಟಣದ ಮಹಾದೇವ (ರೈತ ಘಟಕದ ತಾಲೂಕು ಅಧ್ಯಕ್ಷರಾಗಿ) ಆಯ್ಕೆಯಾದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ರಾಜ್ಯ ಕಾರ್ಯಾಧ್ಯಕ್ಷ ಉಮೇಶ ಗೌಡ ಅರಳಳ್ಳಿ ಆದೇಶ ಪತ್ರ ನೀಡಿದರು. ನಂತರ ಮಾತನಾಡಿ, ನೇಮಕವಾದ ಪದಾಧಿಕಾರಿಗಳು ನಾಡು, ನುಡಿ, ನೆಲ, ಜಲದ ರಕ್ಷಣೆಗೆ ಬದ್ಧರಾಗಿ ಸೇವೆ ಸಲ್ಲಿಸಬೇಕು. ಅನ್ಯಾಯದ ವಿರುದ್ಧ ಹೋರಾಟ ನಡೆಸಿ, ಜನತೆಗೆ ನ್ಯಾಯ ಒದಗಿಸಬೇಕು. ಸರ್ಕಾರ ಸಾರ್ವಜನಿಕರ ಹಿತಾಸಕ್ತಿಯನ್ನು ಮರೆತಿದ್ದಾರೆ. ಎಲ್ಲೆಡೆ ಭ್ರಷ್ಟಾಚಾರ, ಅನ್ಯಾಯ, ಅಕ್ರಮ ನಡೆಯುತ್ತಿದೆ. ಇದರ ವಿರುದ್ಧ ಎಲ್ಲರೂ ಧ್ವನಿ ಎತ್ತಬೇಕು ಎಂದರು.

ಜಿಲ್ಲಾಧ್ಯಕ್ಷ ಲಕ್ಷ್ಮಣ ಭೋವಿ, ಉತ್ತರ ಕರ್ನಾಟಕದ ಉಪಾಧ್ಯಕ್ಷ ಖಾಜಾ ಬನ್ನಿಗನೂರು, ಸಿಂಧನೂರು ತಾಲೂಕು ಅಧ್ಯಕ್ಷ ರಫಿ ಕುನ್ನಟಗಿ, ಜಿಲ್ಲಾ ಸಂಚಾಲಕ ಹುಸೇನ ಭಾಷಾ, ಜಿಲ್ಲಾ ಸಹ ಕಾರ್ಯದರ್ಶಿ ಮಲ್ಲಿಕಾರ್ಜುನ ಕುನ್ನಟಗಿ, ಹಾಗೂ ಪ್ರಮುಖರಾದ ವೆಂಕಟೇಶ ಗುತ್ತೇದಾರ, ಮೌನೇಶ ನಾಗಲದಿನ್ನಿ, ಬಸವರಾಜ, ಮಲ್ಲಿಕಾರ್ಜುನ ಪಡಗಿನದೊಡ್ಡಿ, ಶ್ರೀಕಾಂತ ಇತರರಿದ್ದರು.

12 ಅರಕೇರಾ 01 : ಅರಕೇರಾದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆ ರೈತ ಘಟಕಕ್ಕೆ ಆಯ್ಕೆಯಾದ ಪದಾಧಿಕಾರಿಗಳಿಗೆ ರಾಜ್ಯ ಕಾರ್ಯಾಧ್ಯಕ್ಷ ಉಮೇಶ ಗೌಡ ಅರಳಳ್ಳಿ ಭಾನುವಾರ ಆದೇಶ ಪತ್ರ ವಿತರಿಸಿದರು.

# ಪ್ರೇಕ್ಷಕರ ಮನ ಗೆದ್ದ ರಮಾಬಾಯಿ ಅಂಬೇಡ್ಕರ್ ನಾಟಕ : ಪಾಮಯ್ಯ ಮುರಾರಿ

ಯುವ ಮಾರ್ಗ ಸುದ್ದಿ




**ಲಿಂಗಸುಗೂರು,ಅ.13–**ಪುರಸಭೆ ವ್ಯಾಪ್ತಿಯ ಕರಡಕಲ್ ಗ್ರಾಮದ ಶ್ರೀ ಸಿದ್ಧರೂಢ ಮಠದಲ್ಲಿ ರಂಗಾ ಚೇತನ ಕಲಾ ತಂಡ ಕೋತಾ ಇವರ ಪ್ರಥಮ ಪ್ರದರ್ಶನ ರಮಾಬಾಯಿ ಅಂಬೇಡ್ಕರ್ ನಾಟಕ ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿತ್ತು.

ನನ್ನ ಆರೈಕೆಯಲ್ಲಿ ನಿಮ್ಮ ಸಮಯ ವ್ಯರ್ಥ ಮಾಡಬೇಡಿ, ನನ್ನ ಆರೈಕೆಗೆ ಅನೇಕ ವೈದ್ಯರು ದೊರೆಯಬಹುದು. ಆದರೆ, ಶೋಷಿತ ಸಮಾಜಕ್ಕೆ ಅಂಟಿಕೊಂಡಿರುವ ರೋಗ ನಿವಾರಣೆಗೆ ನೀವೊಬ್ಬರೇ ವೈದ್ಯರು ಇದ್ದೀರಿ ಎನ್ನುವ ಸತ್ಯ ಮರೆಯದಿರಿ ಎಂದು ಕ್ಷಯರೋಗದಿಂದ ಬಳಲುತ್ತಿದ್ದ ರಮಾಬಾಯಿ ಅಂಬೇಡ್ಕರ್‌ಗೆ ಹೇಳುವಾಗ ಪ್ರೇಕ್ಷಕರು ರಮಾಬಾಯಿ ಅವರ ಮೂಕವಿಸ್ಮಿತರಾದರು. ಮಗ ಮರಣ ಹೊಂದಿದಾಗ ರಮಾಬಾಯಿ ಪಡುವ ಸಂಕಟಕ್ಕೆ ಪ್ರೇಕ್ಷಕರ ಕಣ್ಣುಗಳು ತೇವಗೊಂಡವು.

ಈ ನಾಟಕದ ಬಗ್ಗೆ ಪಂಚಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ ಮಾತನಾಡಿ ಅದ್ಭುತವಾದ ನಾಟಕ ಪ್ರಥಮ ಪ್ರದರ್ಶನದಲ್ಲಿಯೇ ಕಲಾವಿಧರು ತುಂಬ ಅದ್ಭುತವಾಗಿ ಅಭಿನಯಿಸಿ ಪ್ರೇಕ್ಷಕರ ಮನು ಸೂರೆಗೊಂಡರು ಎಂದರು.

ಈ ಸಂದರ್ಭದಲ್ಲಿ ಹಿರಿಯರಾದ ದಾನಪ್ಪ ನಿಲೋಗಲ್, ಹನುಮಂತಪ್ಪ ಕುಣೆಕೆಲ್ಲೂರು, ಕೃಷ್ಣಾ ಮೋಹಿತೆ, ಎಂ.ಗಂಗಾಧರ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ, ಜಮದಗ್ನಿ ಕೋತಾ, ಮೋಹನ್ ಗೋಸ್ಲೆ, ಆಜಪ್ಪ ಕರಡಕಲ್ ಸೇರಿ ಇತರರು ಇದ್ದರು.

# ಪರ ಭಾಷೆ ವ್ಯಾಮೋಹ ಬೇಡ : ಶಾಸಕ ಹಂಪಯ್ಯ ನಾಯಕ

ಯುವ ಮಾರ್ಗ ಸುದ್ದಿ

**ಸಿರವಾರ, ಅ.13–**ನಮ್ಮ ಜನರು ಪರ ಭಾಷೆಯ ಜನರೊಂದಿಗೆ ಶೋಕಿಗಾಗಿ ಕನ್ನಡದಲ್ಲಿ ಮಾತನಾಡದೇ ಅವರಂತೆಯೇ ಹಿಂದಿ, ತೆಲುಗು ಮತ್ತು ಇಂಗ್ಲೀಷ ಭಾಷೆ ಮಾತನಾಡುತ್ತಾರೆ ಇಂತಹ ಜನರಿಗೆ ಅರಿವು ಮೂಡಿಸಲು ಕನ್ನಡ ಸಾಹಿತ್ಯ ಪರಿಷತ್ ಮುಂದಾಗಬೇಕು ಎಂದು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಹಂಪಯ್ಯ ನಾಯಕ ಹೇಳಿದರು.

ಭಾನುವಾರ ಪಟ್ಟಣದ ಜ್ಞಾನಗಂಗಾ ಶಾಲೆಯಲ್ಲಿ ನಡೆದ ಸಿರವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಅವರು ಮಾತನಾಡಿದರು, ನಮ್ಮ ಜನರು ಪರ ಭಾಷೆ ವ್ಯಾಮೋಹಕ್ಕೆ ಒಳಗಾಗಿದ್ದಾರೆ ಅದರಿಂದ ಹೊರತರುವ ಕೆಲಸ ಕನ್ನಡ ಸಾಹಿತ್ಯ ಪರಿಷತ್ತು ಮಾಡಬೇಕಿದೆ ಎಂದರು.ಕನ್ನಡ ಸಾಹಿತ್ಯ ಪರಿಷತ್ತಿಗೆ ಬಹು ವರ್ಷಗಳ ಇತಿಹಾಸ ಹೊಂದಿದೆ ಕನ್ನಡಿಗರಾದ ನಾವೆಲ್ಲರೂ ಕನ್ನಡ ಭಾಷೆ, ನೆಲ, ಜಲ ಸಂರಕ್ಷಣೆಗಾಗಿ ಶ್ರಮಿಸಬೇಕು, ಕನ್ನಡ ಸಾಹಿತ್ಯದ ಬೆಳವಣಿಗೆಗೆ ಪ್ರೇರಣೆ ನೀಡುವ ಶಕ್ತಿ ಸಾಹಿತ್ಯ ಪರಿಷತ್ತಿಗೆ ಇದೆ, ಕನ್ನಡದ ನೆಲ ಜಲ ಮತ್ತು ಭಾಷೆಯ ಬಗ್ಗೆ ಅಭಿರುಚಿ ಬೆಳೆಸುವ ಕೆಲಸ ನಾವು ನೀವು ಕೂಡಿ ಮಾಡೋಣ ನಾವು ಕನ್ನಡದ ರಕ್ಷಣೆಗೆ ಮುಂದಾಗಬೇಕು ಎಂದು ಶಾಸಕ ಜಿ ಹಂಪಯ್ಯ ನಾಯಕ ಹೇಳಿದರು.

ಪಟ್ಟಣದ ಜ್ಞಾನಗಂಗಾ ಪ್ರಾಥಮಿಕ ಮತ್ತು ಪ್ರೌಢಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದು ನವಲಕಲ್ ಬೃಹನ್ಮಠದ ಶ್ರೀ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನಿದ್ಯದಲ್ಲಿ,ಸಿರವಾರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ



ಅವರು ಕನ್ನಡ ಭಾಷೆ ಮತ್ತು ಸಾಹಿತ್ಯದ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸುವುದ ರೊಂದಿಗೆ ಸಮಾಜಮುಖಿ ಕಾರ್ಯಕ್ಕೂ ಎಲೆ ಮರೆಯ ಕಾಯಿ ಯಂತೆ ಇರುವ ಕನ್ನಡದ ಬರಹಗಾರರನ್ನು, ಸಾಹಿತ್ಯಗಳನ್ನು ಗುರುತಿಸಿ ಸಾಹಿತ್ಯದ ಬೆಳವಣಿಗೆಗೆ ಪ್ರೇರಣೆ ನೀಡುವ ಶಕ್ತಿ ಕನ್ನಡ ಸಾಹಿತ್ಯ ಪರಿಷತ್ತಿಗೆ ಇದೆ ಎಂದು ಅಭಿಪ್ರಾಯ ವ್ಯಕ್ತಪ ಡಿಸಿದರು.ಕನ್ನಡಕ್ಕೆ ಸುಮಾರು ಎರಡು ಸಾವಿರ ವರ್ಷಗಳ ಇತಿಹಾ ಸವಿದೆ ಆಗಾಗ ಅನ್ಯ ಭಾಷೆಗಳ ಹವಾಳಿಯಿಂದ ಒಳಗಾಗಿದ್ದರು ಕನ್ನಡ ಭಾಷೆ ಸಮೃದ್ಧವಾಗಿದೆ ಎಂದರು.ಈ ಸಂದರ್ಭದಲ್ಲಿ ಪಪಂ ಅದ್ಯಕ್ಷರಾದ ವೈ ಭೂಪನ ಗೌಡ,ಗೌರವ ಅದ್ಯಕ್ಷ ಚುಕ್ಕಿ ಸೂಗಪ್ಪ ಸಾಹುಕಾರ,ರಾಜ್ಯ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಆರೀಫ್ ಮಿಯಾ,ಕನ್ನಡ ಸಾಹಿತ್ಯ ಪರಿಷತ್ತು ನಿಕಟ ಪೂರ್ವ ಅಧ್ಯಕ್ಷ ಟಿ ಬಸವರಾಜ ಪಾಟೀಲ್,ಕನ್ನಡ ಸಾಹಿತ್ಯ ಪರಿಷತ್ತು ನೂತನ ಅದ್ಯಕ್ಷ ಮೌನೇಶ ಹಿರೇಹಣಗಿ, ಕೃಷ್ಣ ನಾಯಕ, ನಾಗಪ್ಪ ಪತ್ತಾರ, ಕಲ್ಲೂರು ಬಸವರಾಜ ನಾಯಕ, ಪಪಂ ಸದಸ್ಯ ಸೂರಿ ದುರುಗಣ್ಣ ನಾಯಕ, ಎಂ.ಗುಂಡಪ್ಪ, ರಂಗನಾಥ ನಾಯಕ, ಶಾಂತಪ್ಪ ಪಿತಗಲ್, ಸೂಗುರೇಶ ಹಿರೇಮಠ ಸೇರಿ ದಂತೆ ನೂತನ ಕಾರ್ಯಕಾರಿ ಸದಸ್ಯರಿಗೆ ಆದೇಶ ಪತ್ರ ನೀಡಿದರು.

## ಸಚಿವರಾದ ಸಂತೋಷ ಲಾಡ್ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ

**ರಾಯಚೂರು,ಅ.13–** ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರು ಅಕ್ಟೋಬರ್ 15ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಮಧ್ಯಾಹ್ನ 1.30ಗಂಟೆಗೆ ಯಾದಗಿರಿ ಜಿಲ್ಲೆಯಿಂದ ನಿರ್ಗಮಿಸಿ ಮಧ್ಯಾಹ್ನ 2.30 ಗಂಟೆಗೆ ರಾಯಚೂರಿಗೆ ಆಗಮಿಸಿ, ಸರ್ಕ್ಯೂಟ್ ಹೌಸ್ ನಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ.

ಮಧ್ಯಾಹ್ನ 3 ಗಂಟೆಗೆ ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ನಡೆಯುವ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತ ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 5.30ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುದಗಲ್ ನವೋದಯದಿಂದ 9, 11ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

**ರಾಯಚೂರು,ಅ.13–** ಜಿಲ್ಲೆಯ ಲಿಂಗಸುಗೂರು ತಾಲೂಕಿನ ಮುದಗಲ್ ಪಿಎಮ್‌ಶ್ರೀ ನವೋದಯ ವಿದ್ಯಾಲಯದಿಂದ 9 ಹಾಗೂ 11ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯ ಅವಧಿ ಅಕ್ಟೋಬರ್ 21ರವರೆಗೆ ವಿಸ್ತರಿಸಲಾಗಿದೆ.

9ನೇ ತರಗತಿ ಪ್ರವೇಶಕ್ಕೆ 8ನೇ ತರಗತಿ ಓದುತ್ತಿರುವ ಹಾಗೂ 11 ತರಗತಿ ಪ್ರವೇಶಕ್ಕೆ 10ನೇ ತರಗತಿ ಓದುತ್ತಿರುವ ಆಸಕ್ತರು ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ವೆಬ್‌ಸೈಟ್ ವಿಳಾಸ: https://cbseitms.rcil.gov.in/nvs11 & www.navodaya.gov.in £À°è ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 7204109046, 7899009900. 9703473495ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮುದಗಲ್ ಪಿಎಮ್‌ಶ್ರೀ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಎಂ ಸ್ವನಿಧಿ ಯೋಜನೆಯಡಿ ಸಾಲ–ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು.ಅ.13–**ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ್ ನಿಧಿ (ಪಿಎಂ ಸ್ವ–ನಿಧಿ) ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯು ಜೂನ್ 2020ರಲ್ಲಿ ಪ್ರಾರಂಭಿಸಲ್ಪಟ್ಟಿದ್ದು, ರಾಷ್ಟ್ರ ಮಟ್ಟದಲ್ಲಿ ಇಲ್ಲಿವರೆಗೆ 68 ಲಕ್ಷಕ್ಕೂ ಹೆಚ್ಚು ಬೀದಿ ವ್ಯಾಪಾರಿಗಳಿಗೆ ಯಶಸ್ವಿಯಾಗಿ ಸಾಲ ಸೌಲಭ್ಯವನ್ನು ಕಲ್ಪಿಸಲಾಗಿದೆ. ಕೇಂದ್ರ ಸಚಿವ ಸಂಪುಟವು ಪಿಎಂ ಸ್ವ–ನಿಧಿ ಯೋಜನೆಯ ಪುನರ್ ರಚನೆ ಮತ್ತು ವಿಸ್ತರಣೆಯನ್ನು ಮಾರ್ಚ್ 2030ರವರೆಗೆ ಅನುಮೋದಿಸಲಾಗಿದೆ.

ಈ ಯೋಜನೆಯಡಿ ಆರ್ಥಿಕ ಸೇರ್ಪಡೆಯನ್ನು ಹೆಚ್ಚಿಸುವುದು, ಡಿಜಿಟಲ್ ವಹಿವಾಟು ನಡೆಸಲು ಉತ್ತೇಜಿಸುವುದು, ಸಾಮರ್ಥ್ಯ ಅಭಿವೃದ್ಧಿಯನ್ನು ವೃದ್ಧಿಸುವುದು ಮತ್ತು ಬೀದಿ ಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದ ಸದಸ್ಯರಿಗೆ ಸಾಮಾಜಿಕ ಭದ್ರತಾ ಯೋಜನೆಗಳನ್ನು ಕಲ್ಪಿಸುವುದನ್ನು ಖಚಿತಪಡಿಸಿಕೊಳ್ಳುವ ಮೂಲಕ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ವಿಸ್ತರಿಸಿ ಪುನರ್ ರಚಿಸಲಾಗಿದೆ.

ಮಂಜೂರಾತಿ ಮತ್ತು ವಿತರಣೆಗಾಗಿ ಬಾಕಿ ಇರುವ ಎಲ್ಲಾ ಅರ್ಜಿಗಳನ್ನು ವಿಲೇ ಮಾಡಲು, ಬ್ಯಾಂಕಿನಿಂದ ಹಿಂದಿರುಗಿಸಲ್ಪಟ್ಟ ಅರ್ಜಿಗಳನ್ನು ಮರು ಸಲ್ಲಿಸುವುದು, ಡಿಜಿಟಲನಲ್ಲಿ ನಿಷ್ಕ್ರಿಯಗೊಂಡ ಬೀದಿ ವ್ಯಾಪಾರಿಗಳನ್ನು ಡಿಜಿಟಲ್ ವಹಿವಾಟಿನಲ್ಲಿ ತೊಡಗಿಸಿಕೊಳ್ಳಲು ಉತ್ತೇಜಿಸುವುದು, ಎಲ್ಲಾ ಬೀದಿ ಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದ ಸದಸ್ಯರುಗಳಿಗೆ ಸಾಮಾಜಿಕ ಭದ್ರತಾ ಯೋಜನೆಯನ್ನು ಕಲ್ಪಿಸಲು ಆದೇಶ ಇರುತ್ತದೆ. ಪಿಎಂ ಸ್ವನಿಧಿ ಫಲಾನುಭವಿಗಳ ಮೊದಲನೇ ಹಂತ 15000 ರೂ.ಗಳನ್ನು ನೀಡಲಾಗುವುದು.

ಆಸಕ್ತರು ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಆಧಾರ ಕಾರ್ಡ್, ಚುನಾವಣಾ ಗುರುತಿನ ಚೀಟಿ, ವೈಯಕ್ತಿಕ ಬ್ಯಾಂಕ್ ಪಾಸ್‌ಬುಕ್, ವ್ಯಾಪಾರ ಮಾಡುತ್ತಿರುವ ಸ್ಥಳದಲ್ಲಿನ ಪೋಟೋ–2, ಪಾಸ್ ಪೋಟೋ–2 ಹಾಗೂ ವ್ಯಾಪಾರದ ಗುರುತಿನ ಚೀಟಿನೊಂದಿಗೆ ಅಕ್ಟೋಬರ್ 29ರ ಸಂಜೆ 5ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಸಮಯದಲ್ಲಿ ಪಾಲಕೆಯಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111

9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H